BV

ಕನ್ನಡ ದಿನಪತ್ರಿಕೆ

21 ಫೆಬ್ರುವರಿ । ಬುಧವಾರ
21 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 04 ಪುಟ – 4 | RNI.KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ರಾಜ್ಯಸಭೆಗೆ ಸೋನಿಯಾ ಗಾಂಧಿ ಅವಿರೋಧ ಆಯ್ಕೆ



ನವದೆಹಲಿ: ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರು ಮಂಗಳವಾರ ರಾಜಸ್ಥಾನದಿಂದ ರಾಜ್ಯಸಭೆಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸೋನಿಯಾ ಗಾಂಧಿ ಅವರೊಂದಿಗೆ ಬಿಜೆಪಿ ನಾಯಕರಾದ ಚುನ್ನಿಲಾಲ್ ಗರಾಸಿಯಾ ಮತ್ತು ಮದನ್ ರಾಥ–ೋಡ್ ಕೂಡ ಮೇಲ್ಮನೆಗೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ವಿಧಾನಸಭೆ ಕಾರ್ಯದರ್ಶಿ ಮಹಾವೀರ್ ಪ್ರಸಾದ್ ಶರ್ಮಾ ತಿಳಿಸಿದ್ದಾರೆ.

ನಾಮಪತ್ರ ಹಿಂಪಡೆಯಲು ಮಂಗಳವಾರ ಕೊನೆಯ ದಿನವಾಗಿತ್ತು. ಕಣದಲ್ಲಿ ಬೇರೆ ಯಾರೂ ಸ್ಪರ್ಧಿಗಳು ಇಲ್ಲದ ಕಾರಣ, ಮೂವರು ನಾಯಕರು ಅವಿರೋಧವಾಗಿ ರಾಜ್ಯಸಭೆಗೆ ಆಯ್ಕೆಯಾಗಿದ್ದಾರೆ.

## ರಾಜ್ಯದ ಎಲ್ಲಾ ವಿವಿಗಳಲ್ಲಿ ಏಕರೂಪದ ಶಿಕ್ಷಣ, ಪಠ್ಯಕ್ರಮ, ಪರೀಕ್ಷಾ ಪದ್ಧತಿ ಜಾರಿ



ಬೆಂಗಳೂರು: ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಏಕರೂಪದ ಶಿಕ್ಷಣ, ಪಠ್ಯಕ್ರಮ, ಪರೀಕ್ಷಾ ಪದ್ಧತಿ ಜಾರಿಗೆ ತಜ್ಞರ ಸಮಿತಿ ಶಿಫಾರಸು ಮಾಡಿದ್ದು, ಇದನ್ನು ಜಾರಿಗೆ ತರಲಾಗುವುದು ಎಂದು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್ ತಿಳಿಸಿದ್ದಾರೆ.

ವಿಧಾನ ಪರಿಷತ್ ನಲ್ಲಿ ಕಾಂಗ್ರೆಸ್ ಸದಸ್ಯ ಮಂಜುನಾಥ ಭಂಡಾರಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಎಲ್ಲಾ ವಿಶ್ವವಿದ್ಯಾಲಯಗಳಲ್ಲಿ ಏಕರೂಪದ ಶಿಕ್ಷಣ, ಪಠ್ಯಕ್ರಮ, ಪರೀಕ್ಷಾ ಪದ್ಧತಿ ಜಾರಿ ಕುರಿತಾಗಿ ವಿಶ್ವವಿದ್ಯಾಲಯಗಳ ಕಾಯ್ದೆಗೆ ತಿದ್ದುಪಡಿ ತರಲಾಗುವುದು ಎಂದು ಹೇಳಿದ್ದಾರೆ.

ಸರ್ಕಾರಿ ಮತ್ತು ಖಾಸಗಿ ವಿವಿಗಳಲ್ಲಿ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಚಿನ್ನ, ಬೆಳ್ಳಿ ಪದಕ ನೀಡುತ್ತಿದ್ದು, ಈ ಪದ್ಧತಿಯನ್ನು ಇನ್ನಷ್ಟು ಸರಳೀಕರಣ ಮಾಡಲಾಗುವುದು. ಶಿಕ್ಷಣ ವ್ಯವಸ್ಥೆಯನ್ನು ಇನ್ನಷ್ಟು ಉತ್ತಮಗೊಳಿಸಲು ರಚಿಸಲಾದ ಸಮಿತಿ ನೀಡುವ ಶಿಫಾರಸು ಆಧರಿಸಿ ಕ್ರಮ ಕೈಗೊಳ್ಳಲಾಗುತ್ತದೆ. ಎಲ್ಲ ವಿವಿ ಕುಲಪತಿಗಳೊಂದಿಗೆ ಸಭೆ ನಡೆಸಿ ಅಭಿಪ್ರಾಯ ಪಡೆಯಲಾಗುವುದು ಎಂದು ಹೇಳಿದ್ದಾರೆ.

## ಧಾರ್ಮಿಕ ಮುಖಂಡನ ಸಾವಾಗುತ್ತೆ: ಭವಿಷ್ಯ ನುಡಿದ ಕೋಡಿಮಠದ ಶ್ರೀ




ಕೋಲಾರ: ಈವರ್ಷ ಧಾರ್ಮಿಕ ಮುಖಂಡನೊಬ್ಬನ ಸಾವಾಗುತ್ತೆ, ಮತಾಂಧತೆ ಹೆಚ್ಚಾಗುತ್ತದೆ. ಜಾಗತಿಕ ಮಟ್ಟದಲ್ಲಿ ಬಾಂಬ್ ಸ್ಫೋಟ ಸಂಭವಿಸುತ್ತೆ, ಭೂಕಂಪ ಆಗುತ್ತೆ ಎಂದು ಕೋಡಿಮಠದ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಭವಿಷ್ಯ ನುಡಿದಿದ್ದಾರೆ.

ಕೋಲಾರ ತಾಲೂಕಿನ ನರಸಾಪುರದ ಖಾಸಗಿ ಕಾರ್ಯಕ್ರಮದಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ವರ್ಷ ಜಾಗತಿಕ ಮಟ್ಟದಲ್ಲಿ ತೊಂದರೆ ಇದೆ. ಬೆಂಕಿ, ನೀರಿನ ಹಾವಳಿ, ಯುದ್ಧ ಆಗುತ್ತೆ. ಅನೇಕ ಸಾವು ನೋವುಗಳು ಸಂಭವಿಸುತ್ತೆ. ಮತಾದಂತೆ ಹೆಚ್ಚಾಗುತ್ತೆ, ಬಾಂಬ್ ಸ್ಫೋಟ ಸಂಭವಿಸುತ್ತೆ, ಭೂಕಂಪ ಆಗುತ್ತೆ. ಧಾರ್ಮಿಕ ಮುಖಂಡನ ಸಾವು ಸಹ ಆಗಲಿದೆ ಎಂದು ಆತಂಕಪಟ್ಟಿದ್ದಾರೆ.

ಉತ್ತಮ ಮಳೆ–ಬೆಳೆ ಆಗುತ್ತೆ: ರಾಜ್ಯ ಹಾಗೂ ರಾಷ್ಟ್ರ ರಾಜ–ಕಾರಣ ಕುರಿತು ಯುಗಾದಿ ಕಳೆದ ನಂತರ ಹೇಳುವೆ. ಒಂದು ತಿಂಗಳು ಕಳೆದ ಮೇಲೆ ಮಳೆ, ಬೆಳೆ, ರಾಜಕೀಯ, ದುಡಿಮೆ, ವ್ಯಾಪಾರ ಎಲ್ಲಾ ಗೊತ್ತಾಗಲಿದೆ. ಯುಗಾದಿ ನಂತರ ರಾಜ್ಯದಲ್ಲಿ ಒಳ್ಳೆಯ ಮಳೆ, ಬೆಳೆ ಆಗುವ ಲಕ್ಷಣಗಳಿವೆ ಎಂದು ತಿಳಿಸಿದ್ದಾರೆ.

## ಬೆಂಗಳೂರು ಶಿಕ್ಷಕರ ಕ್ಷೇತ್ರದ ಉಪ ಚುನಾವಣೆಯಲ್ಲಿ 'ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ'ಗೆ ಭರ್ಜರಿ ಗೆಲುವು



ಬೆಂಗಳೂರು: ಬೆಂಗಳೂರು ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಚುನಾವಣೆಗಾಗಿ ನಡೆದಂತ ಮತಏ–ಣಿಕೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ ಅವರು ಭರ್ಜರಿ ಗೆಲುವು ಸಾಧಿಸಿದ್ದಾರೆ.

ಬೆಂಗಳೂರು ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಉಪಚುನಾವಣೆಗೆ ಇತ್ತೀಚೆಗೆ ಮತದಾನ ನಡೆದಿತ್ತು. ಆ ಮತಗಳ ಏಣಿಕೆ ಕಾರ್ಯ ಇಂದು ಬೆಂಗಳೂರಲ್ಲಿ ನಡೆಸಲಾಗಿತ್ತು. ಇಂತಹ ಮತಗಳ ಏಣಿಕೆ ಕಾರ್ಯ ಮುಕ್ತಾಯವಾಗಿದ್ದು ಫಲಿತಾಂಶ ಕೂಡ ಹೊರಬಿದ್ದಿದೆ.

ಆರಂಭದಿಂದಲೂ ಮುನ್ನಡೇ ಕಾಯ್ದುಕೊಂಡಿದ್ದಂತ ಪುಟ್ಟಣ್ಣ ಅವರು, 1506 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ ಎಂಬುದಾಗಿ ತಿಳಿದು ಬಂದಿದೆ.

1506 ಮತಗಳಿಂದ ಜೆಡಿಎಸ್ ಹಾಗೂ ಬಿಜೆಪಿ ಬೆಂಬಲಿತ ಅಭ್ಯರ್ಥಿ ಎ.ಪಿ ರಂಗನಾಥ್ ಅವರು ಸೋಲು ಕಂಡರೇ, ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ ಅವರು ಭರ್ಜರಿ ಗೆಲುವು ಸಾಧಿಸಿದ್ದಾರೆ ಎಂಬುದಾಗಿ ತಿಳಿದು ಬಂದಿದೆ. ವಿಧಾನಪ–ರಿಷತ್ ಉಪ ಚುನಾವಣೆಯ ಫಲಿತಾಂಶದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ ಅವರು ಭರ್ಜರಿ ಗೆಲುವು ಸಾಧಿಸಿರೋದಾಗಿ ತಿಳಿದು ಬಂದಿದೆ. ಎಷ್ಟು ಮತಗಳಿಂದ ಗೆಲುವು ಸಾಧಿಸಿದ್ದಾರೆ ಎನ್ನುವ ಅಂತಿಮ ಫಲಿತಾಂಶವನ್ನು ಚುನಾವಣಾ ಆಯೋಗ ಅಧಿಕೃತವಾಗಿ ಪ್ರಕಟಿಸಿದಾಗ ತಿಳಿದು ಬರಲಿದೆ.

# ರಾಜ್ಯದಲ್ಲಿ 2,300 ಕೋಟಿ ರೂ. ಹೂಡಿಕೆಗೆ ಟಾಟಾ ಸಮೂಹ ಗ್ರೀನ್ ಸಿಗ್ನಲ್: ಸಿಎಂ ಶ್ಲಾಘನೆ



ಬೆಂಗಳೂರು: ಟಾಟಾ ಸಮೂಹದ ಭಾಗವಾಗಿರುವ ಏರ್ ಇಂಡಿಂ–ಯಾ ಮತ್ತು ಟಾಟಾ ಅಡ್ವಾನ್ಸ್ಡ್ ಸಿಸ್ಟಮ್ಸ್ ಲಿಮಿಟೆಡ್ ರಾಜ್ಯದಲ್ಲಿ ವಿವಿಧ ಯೋಜನೆಗಳಿಗೆ 2,300 ಕೋಟಿ ರೂ. ಹೂಡಿಕೆ ಮಾಡಲು ಮುಂದಾಗಿದೆ. ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮ್ಮುಖದಲ್ಲಿ ರಾಜ್ಯ ಸರ್ಕಾರದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿತು.

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ನೇತೃತ್ವದಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತು ಏರ್ ಇಂಡಿಯಾದ ಮುಖ್ಯ ವಾಣಿಜ್ಯ ವ್ಯವಹಾರ ಅಧಿಕಾರಿ ನಿಪುಣ್ ಅಗರವಾಲ್ ಹಾಗೂ ಟಿಎಎಸ್ಎಲ್ ಸಿಇಒ ಸುಕರಣ್ ಸಿಂಗ್ ಒಡಂಬಡಿಕೆ ಪತ್ರಗಳನ್ನು ಪರಸ್ಪರ ವಿನಿಮಯ ಮಾಡಿಕೊಂಡರು. ಈ ಮಾಹಿತಿಯನ್ನು ಸಿಎಂ ತಮ್ಮ ಸೋಶಿಯಲ್ ಮೀಡಿಯಾ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ.

**ಸಿಎಂ ಫ ಖಾತೆಯಲ್ಲಿ ಏನಿದೆ?**

25,000ಕ್ಕೂ ಹೆಚ್ಚು ಉದ್ಯೋಗ ಸೃಷ್ಟಿ: ಟಾಟಾ ಸಮೂಹದ ಈ ಹೂಡಿಕೆಯಿಂದ ನೇರವಾಗಿ 1,650 ಉದ್ಯೋಗಗಳು ಸೃಷ್ಟಿಯಾಗಲಿವೆ. ಒಟ್ಟು ಹೂಡಿಕೆಯ ಪೈಕಿ ಏರ್ ಇಂಡಿಯಾ ಕಂಪನಿಯು ಬೆಂಗಳೂ–ರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪ ವಿಮಾನಗಳ ನಿರ್ವಹಣೆ, ದುರಸ್ತಿ ಮತ್ತು ಓವರ್–ಹಾಲ್ (ಎಂಆರ್ ಒ) ಘಟಕವನ್ನು ಸ್ಥಾಪಿಸಲು 1,300 ಕೋಟಿ ರೂ. ಹೂಡಿಕೆ ಮಾಡುತ್ತಿದೆ. ಇದರಿಂದಾಗಿ 1,200 ಜನರಿಗೆ ನೇರವಾಗಿ ಉದ್ಯೋಗ ಸಿಗಲಿದ್ದು, ಪರೋಕ್ಷವಾಗಿ 25 ಸಾವಿರಕ್ಕೂ ಹೆಚ್ಚು ಉದ್ಯೋಗಗಳು ಸೃಷ್ಟಿಯಾಗಲಿವೆ. ಇಡೀ ಭಾರತದಲ್ಲೇ ಇದು ಮೊಟ್ಟಮೊದಲ ಯೋಜನೆಯಾಗಿದೆ.

310 ಕೋಟಿ ರೂ.ವೆಚ್ಚದಲ್ಲಿ ಗನ್ ತಯಾರಿಕೆ ಘಟಕ ಸ್ಥಾಪನೆ: ಟಾಟಾ ಅಡ್ವಾನ್ಸ್ಡ್ ಸಿಸ್ಟಮ್ಸ್ ಲಿಮಿಟೆಡ್ (ಟಿಎಎಸ್ಎಲ್) ಕಂಪನಿಯು ಮೂರು ಯೋಜನೆಗಳಿಗೆ 1,030 ಕೋಟಿ ರೂ. ಬಂಡವಾಳ ಹೂಡಲಿದೆ. ಇವುಗಳ ಪೈಕಿ 420 ಕೋಟಿ ರೂ.ಗಳು ನಾಗರಿಕ ವಿಮಾನಗಳನ್ನು ಸರಕು ಸಾಗಣೆ ವಿಮಾನಗಳನ್ನಾಗಿ (ಫ್ರೈಟರ್) ಪರಿವರ್ತಿಸುವ ಘಟಕ ಸ್ಥಾಪನೆಗೆ ವಿನಿಯೋಗಿಸಲಿದೆ. ಜೊತೆಗೆ 310 ಕೋಟಿ ರೂ. ಹೂಡಿಕೆಯೊಂದಿಗೆ ಗನ್ ತಯಾರಿಕೆ ಘಟಕ ಮತ್ತು 300 ಕೋಟಿ ರೂ. ವೆಚ್ಚದಲ್ಲಿ ವಿಮಾನಯಾನ ಮತ್ತು ರಕ್ಷಣಾ ಸಂಶೋಧನೆ ಹಾಗೂ ಅಭಿವೃದ್ಧಿಯನ್ನು ಕೈಗೆತ್ತಿಕೊಳ್ಳಲಿದೆ. ಇದರಿಂದ 450 ಉದ್ಯೋಗಗಳು ಸೃಷ್ಟಿಯಾಗಲಿವೆ.

ಬೆಂಗಳೂರು ವಿಮಾನ ನಿಲ್ದಾಣದ ಸಮೀಪ ಮತ್ತು ಕೋಲಾರದಲ್ಲಿ ಖಿಂಖಿಐ ಸ್ಥಾಪಿಸಲಿರುವ ಗನ್ ತಯಾರಿಕೆ ಘಟಕದ ಮೂಲಕ ಕಂಪನಿಗೆ ಅಗತ್ಯವಿರುವ 13 ಸಾವಿರ ಬಿಡಿಭಾಗಗಳ ಪೈಕಿ ಶೇ.50ರಷ್ಟನ್ನು ಪೂರೈಸಿಕೊಳ್ಳುವ ಆಲೋಚನೆ ಹೊಂದಿದೆ. ಇದರಿಂದಾಗಿ 300ಕ್ಕೂ ಹೆಚ್ಚು ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ 2–3 ಸಾವಿರ ಜನ–ರಿಗೆ ಉದ್ಯೋಗಗಳು ಸಿಗಲಿವೆ. 1939ರಷ್ಟು ಹಿಂದೆಯೇ ಬೆಂಗಳೂ–ರಿನಲ್ಲಿ ಎಚ್ಎಎಲ್ ಸ್ಥಾಪನೆಯಾಗುವುದರೊಂದಿಗೆ ರಾಜ್ಯವು ವೈಮಾನಿಕ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿದೆ.

ರಕ್ಷಣಾ ಇಲಾಖೆಗೆ ಬೇಕಾಗುವ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳ ಪೈಕಿ ಶೇ.67ರಷ್ಟು ಕರ್ನಾಟಕದಲ್ಲೇ ತಯಾರಾಗುತ್ತಿದೆ. ಜೊತೆಗೆ ದೇಶದ ರಕ್ಷಣಾ ವಲಯದ ರಫ್ತು ವಹಿವಾಟಿಗೆ ರಾಜ್ಯವು ಶೇ.65ರಷ್ಟು ಕೊಡುಗೆ ನೀಡುತ್ತಿದೆ. ದೇಶದಲ್ಲಿ ಈ ವಲಯದಲ್ಲಿರುವ ಕಂಪನಿಗಳ ಪೈಕಿ ಶೇ.70ರಷ್ಟು ಕಂಪನಿಗಳು ಕರ್ನಾಟಕದಲ್ಲೇ ನೆಲೆ ಹೊಂದಿವೆ ಎಂದು ಸಿಎಂ ಶ್ಲಾಘಿ–ಸಿದ್ದಾರೆ. ಈ ಸಂದರ್ಭದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ರಜನೀಶ್ ಗೋಯಲ್, ಮುಖ್ಯಮಂತ್ರಿಯವರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಎಲ್.ಕೆ ಅತೀಕ್, ಕೈಗಾರಿಕಾ ಇಲಾಖೆಯ ಆಯುಕ್ತೆ ಗುಂಜನ್ ಕೃಷ್ಣ ಸೇ–ರಿದಂತೆ ಹಿರಿಯ ಅಧಿಕಾರಿಗಳು ಹಾಗೂ ವಿವಿಧ ಕಂಪನಿಗಳ ಪ್ರತಿನಿಧಿಗಳು ಹಾಜರಿದ್ದರು.

## ಬೆಳಗಾವಿಯಲ್ಲಿ ಭಾಷೆ ಬಗ್ಗೆ ಭೇದಭಾವ ಇಲ್ಲ: ಸಚಿವ ಸತೀಶ್ ಜಾರಕಿಹೊಳಿ

ಬೆಂಗಳೂರು: ಕನ್ನಡಿಗರ, ಮರಾಠಿಗರ ನಡುವೆ ಭಾಷೆ ಬಗ್ಗೆ ಭೇದಭಾವ ಇಲ್ಲ. ಬೆಳಗಾವಿ ಜಿಲ್ಲೆಯ ಬಗ್ಗೆ ಎಪ್ಪತ್ತರ ದಶಕದಲ್ಲಿ ಇರುವ ಕಲ್ಪನೆ ಇನ್ನು ಇದೆ. 70ರ ದಶಕದಲ್ಲಿ ಮರಾಠಿ ಪ್ರಾಭಲ್ಯವಿತ್ತು. ಆದರೆ ಪ್ರಸ್ತುತ ಪರಿಸ್ಥಿತಿ ಬದಲಾಗಿದೆ. ಕನ್ನಡ ಭಾಷೆಯ ಪ್ರಭಾವ ಹೆಚ್ಚಾಗಿದೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ವಿಧಾನ ಪರಿಷತ್ ಕಲಾಪದಲ್ಲಿ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಮಸೂದೆ ಕು–ರಿತು ಇಂದು ನಡೆದ ಚರ್ಚೆಯ ವೇಳೆ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಕೋಟ ಶ್ರೀನಿವಾಸ್ ಪೂಜಾರಿ ಅವರ ಪ್ರಶ್ನೆಗೆ ಉತ್ತ–ರಿಸಿದ ಸಚಿವರು, ಬೆಳಗಾವಿ ಜಿಲ್ಲೆಯ ಗಡಿ ಪ್ರದೇಶಗಳ ಶಾಲೆಗಳಲ್ಲಿ ನೂರಕ್ಕೆ ನೂರಷ್ಟು ಮರಾಠಿ ಭಾಷೆಯೂ ಇಲ್ಲ. ಕನ್ನಡವೂ ಇಲ್ಲ. ಕನ್ನಡ, ಮರಾಠಿ ಎರಡು ಇದೆ ಎಂದರು.



ಜಿಲ್ಲೆಯಲ್ಲಿ ಕನ್ನಡ ಮಾತ ನಾಡುವವರು ಮರಾಠಿ ಮಾತ ನಾಡುತ್ತಾರೆ. ಮರಾಠಿ ಮಾತನಾಡುವವರು ಕನ್ನಡ ಭಾಷೆ ಮಾತನಾಡುತ್ತಾರೆ.

ಹೀಗಾಗಿ ಭಾಷೆ ಬಗ್ಗೆ ಭೇದ ಭಾವ ಇಲ್ಲ. ಸಂದರ್ಭ ಅನುಗುಣವಾಗಿ ಕನ್ನಡ, ಮರಾಠಿ ಭಾಷೆ ಮಾತನಾಡುತ್ತಾರೆ. ಬೆಂಗಳೂ–ರಿಗೆ, ಬೆಳಗಾವಿಗೆ ಹೋಲಿಕೆ ಮಾಡುವುದು ಸರಿಯಲ್ಲ. ಬೆಂಗಳೂರಿನ ಸಮಸ್ಯೆಯೇ ಬೇರೆ. ಬೆಂಗಳೂರಿಗೆ ಬಂದವರಿಗೆ ಸಾಕಷ್ಟು ಜನಕ್ಕೆ ಕನ್ನಡವೇ ಬರಲ್ಲ.

ಆದರೆ ಬೆಳಗಾವಿಯಲ್ಲಿ ಮರಾಠಿ ಮಾತನಾಡುವವರು ಕನ್ನಡ ಭಾಷೆ ಮಾತನಾಡುತ್ತಾರೆ ಎಂದು ಹೇಳಿದರು.

ಇನ್ನು ಮರಾಠಿ ಬೇರೆ. ಮರಾಠಿ ಭಾಷಿಕರು ಬೇರೆ. ಜಿಲ್ಲೆಯ ಮೂರ್ನಾಲ್ಕು ಮತಕ್ಷೇತ್ರಗಳಲ್ಲಿ ಎಸ್ಸಿ, ಎಸ್ಟಿ ಸಮಾಜದವರು ಮರಾಠಿ ಭಾಷೆಯನ್ನೇ ಮಾತನಾಡುತ್ತಾರೆ ಎಂದ ಸಚಿವರು, ಖಾನಾಪುರ ತಾಲೂಕಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮರಾಠಿ ನಾಮಫಲಕಗಳು ಅಳವಡಿಸಿರುವುದು ನಮ್ಮ ಗಮನಕ್ಕೂ ಇದೆ. ಹೀಗಾಗಿ ಸಚಿವ ಶಿವರಾಜ ತಂಗಡಗಿಯವರು ಒಳ್ಳೆಯ ಕಾಯ್ದೆಯನ್ನು ಜಾರಿಗೆ ತರುತ್ತಿದ್ದು, ಆದಷ್ಟು ಬೇಗ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ಮಸೂದೆ ಅಂಗೀಕಾರ ಮಾಡಬೇಕೆಂದು ಸದನಕ್ಕೆ ತಿಳಿಸಿದರು.

## ಬಿಜೆಪಿ ಇದುವರೆಗೆ ಸ್ವಂತ ಬಲದಿಂದ ಅಧಿಕಾರಕ್ಕೆ ಬಂದೇ ಇಲ್ಲ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ಬಿಜೆಪಿ ರಾಜ್ಯದಲ್ಲಿ ಇವತ್ತಿನವರೆಗೂ ಸ್ವಂತ ಬಲದಿಂದ ಅಧಿಕಾರಕ್ಕೆ ಬಂದೇ ಇಲ್ಲ, ಹಿಂಬಾಗಿಲಲ್ಲಿ ಬಂದಿದ್ದಾರೆ ಅಷ್ಟೇ. ಬಿಜೆಪಿಯಿಂದ ಯಡಿಯೂರಪ್ಪ, ಬೊಮ್ಮಾಯಿ, ಶೆಟ್ಟರ್, ಸದಾನಂದ ಗೌಡ ಮುಖ್ಯಮಂತ್ರಿ ಆದರು. ಇವರ್ಯಾರೂ ಸ್ಪಷ್ಟ ಬಹುಮತ ಪಡೆದು ಮುಖ್ಯಮಂತ್ರಿ ಆದ–ವರಲ್ಲ ಎಂದು ಸದನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುಡುಗಿದ್ದಾರೆ.

ವಿಧಾನಸಭೆಯಲ್ಲಿ ರಾಜ್ಯಪಾಲರ ಭಾಷಣ ಮೇಲೆ ನಡೆದ ಚರ್ಚೆಗೆ ಉತ್ತರ ನೀಡಿದ ಮುಖ್ಯಮಂತ್ರಿಗಳು, ಆಪರೇಷನ್ ಕಮಲ ಮತ್ತು ಹಿಂಬಾಗಿಲ ಮೂಲಕ ಆಮಿಷವೊಡ್ಡಿ ನಮ್ಮ ಶಾಸಕರನ್ನು ಸೆಳೆದು ಅಧಿಕಾರಕ್ಕೇರಿದರು ಎಂದು ಟೀಕಿಸಿ, ಇವತ್ತಿನವರೆಗೆ ಸ್ಪಷ್ಟ ಬಹುಮತ ಪಡೆದು ಅಧಿಕಾರ ನಡೆಸಿದ ಉದಾಹರಣೆ ಇದೆಯೇ , ಇದ್ದರೆ ತೋರಿಸಿ ಎಂದು ಸವಾಲು ಹಾಕಿದರು.

ನಾವು 2013 ರಲ್ಲಿ 2023 ರಲ್ಲಿ ಸ್ಪಷ್ಟ ಬಹುಮತದ ಮೂಲಕ ಅಧಿಕಾರಕ್ಕೆ ಬಂದಿದ್ದೇವೆ. ಜನ ನಮ್ಮನ್ನು ತಿರಸ್ಕರಿಸಿ ವಿರೋಧ ಪಕ್ಷದಲ್ಲಿ ಕೂರಿಸಿದಾಗಲೂ ತಲೆಬಾಗಿ ಜನರ ತೀರ್ಮಾನವನ್ನು ಒಪ್ಪಿಕೊಂಡು ರಚನಾತ್ಮಕ ವಿರೋಧ ಪಕ್ಷವಾಗಿ ಕೆಲಸ ಮಾಡಿ ಮತ್ತೆ ಅಧಿಕಾರಕ್ಕೆ ಬಂದಿದ್ದೇವೆ. ನಾವು ಸುಳ್ಳುಗಳ ಆಸರೆಗೆ ಹೋಗಲಿಲ್ಲ ಎಂದು ಹೇಳಿದರು.

## ಹಾಲಿನ ಪ್ರೋತ್ಸಾಹಧನ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ ರಾಜ್ಯಪಾಲರಿಂದ ಸುಳ್ಳು ಹೇಳಿಸಿದೆ: ಬಸವರಾಜ ಬೊಮ್ಮಾಯಿ



ಬೆಂಗಳೂರು: 8.65 ಲಕ್ಷ ಹಾಲು ಉತ್ಪಾದಕರಿಗೆ 757 ಕೋಟಿ ರೂ. ಹಾಲಿನ ಪ್ರೋತ್ಸಾಹಧನವನ್ನು ಅವರ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗಿದೆ ಎಂದು ಹೇಳುವ ಮೂಲಕ ಕರ್ನಾಟಕ ಸರ್ಕಾರವು ಈ ವಿಚಾರದಲ್ಲಿ ರಾಜ್ಯಪಾಲರಿಂದ ಸುಳ್ಳು ಹೇಳಿಸಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮಂಗಳವಾರ ಹೇಳಿದ್ದಾರೆ.

ಕಳೆದ ಆರು ತಿಂಗಳಿನಿಂದಲೂ ಯಾವುದೇ ಪ್ರೋತ್ಸಾಹಧನವನ್ನು ನೀಡಿಲ್ಲ. ಸರ್ಕಾರ ರಾಜ್ಯಪಾಲರಿಂದ ಸುಳ್ಳುಗಳನ್ನು ಹೇಳಿಸಿದೆ ಎಂದು ದೂರಿದರು.

'ಹಿಂದಿನ ಬಿಜೆಪಿ ಆಡಳಿತದಲ್ಲಿ ಹೊಸ ಬಸ್‌ಗಳನ್ನು ಖರೀದಿಸಿಲ್ಲ ಎಂದು ರಾಜ್ಯಪಾಲರು ಮತ್ತೆ ಸುಳ್ಳು ಹೇಳುವಂತೆ ಮಾಡಿದ್ದಾರೆ. ನಾಲ್ಕು ನಿಗಮಗಳಿಗೆ ಹೊಸ ಬಸ್‌ಗಳನ್ನು ಖರೀದಿಸಲಾಗಿದೆ ಎಂಬುದು ಸತ್ಯ. 2022–23ರಲ್ಲಿ ನಾಲ್ಕು ನಿಗಮಗಳಿಗೆ 3,526 ಹೊಸ ಬಸ್‌ಗಳನ್ನು ಸೇರಿಸಲು ಕ್ರಮ ಕೈಗೊಳ್ಳಲಾಗಿದೆ. ನಾವು ಬಿಎಂಟಿಸಿಗೆ 1,311 ಬಸ್‌ಗಳು, ಕೆಎಸ್‌ಆರ್‌ಟಿಸಿಗೆ 50 ಪವರ್ ಪ್ಲಸ್ ಬಸ್‌ಗಳು ಮತ್ತು 20 ವೋಲ್ವೋ ಬಸ್‌ಗಳನ್ನು ಖರೀದಿಸಿದ್ದೇವೆ. ಅವೆಲ್ಲವೂ ಈಗ ಕಾರ್ಯನಿರ್ವಹಿಸುತ್ತಿವೆ' ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಗೆ 3,000 ಕೋಟಿ ರೂ.ಗಳನ್ನು ಮೀಸಲಿಡುವುದಾಗಿ ಬಜೆಟ್‌ನಲ್ಲಿ ಸರ್ಕಾರ ಘೋಷಿಸಿದ್ದು, 5,468 ಕಾಮಗಾರಿಗಳಿಗೆ ಕ್ರಿಯಾ ಯೋಜನೆ ರೂಪಿಸಲಾಗಿದೆ. ಕಳೆದ ವರ್ಷ ನವೆಂಬರ್‌ನಲ್ಲಿ 1,287 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ಎಂದು ತಿಳಿಸಿದರು.

## ಕ್ರಿಮಿನಲ್ ನ್ಯಾಯಾಲಯದಲ್ಲಿ ದಂಡನೆಗೆ ಒಳಗಾದ ಸರ್ಕಾರಿ ನೌಕರರ ವಿರುದ್ಧ ಶಿಸ್ತುಕ್ರಮ : ಸರ್ಕಾರದಿಂದ ಆದೇಶ



ಬೆಂಗಳೂರು: ಕ್ರಿಮಿನಲ್ ನ್ಯಾಯಾಲಯದಲ್ಲಿ ದಂಡನೆಗೆ ಒಳಗಾದ ಸರ್ಕಾರಿ ನೌಕರರ ವಿರುದ್ಧ ಶಿಸ್ತುಕ್ರಮ ಜರುಗಿಸುವ ಬಗ್ಗೆ ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ.

ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14(i)ರ ಅನ್ವಯಿಕೆಗೆ ಸಂಬಂಧಿಸಿದಂತೆ ಹೊರಡಿಸಲಾಗಿರುವ ಉಲ್ಲೇಖಿತ ದಿನಾಂಕ:26.06.1996ರ ಸುತ್ತೋಲೆಯನ್ನು (AIR 1995 SC 1364) ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪ್ರತಿಪಾದಿಸಿದ ತತ್ತ್ವಗಳ ಹಿನ್ನೆಲೆಯಲ್ಲಿ ಹೊರಡಿಸಲಾಗಿದೆ. ಕ್ರಿಮಿನಲ್ ನ್ಯಾಯಾಲಯದಲ್ಲಿ ದಂಡನೆಗೆ ಒಳಗಾದ ಸರ್ಕಾರಿ ನೌಕರನು ಕ್ರಿಮಿನಲ್ ನ್ಯಾಯಾಲಯದ ದಂಡನೆ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಿದ್ದಾನೆ ಅಥವಾ ಇತರೆ ವ್ಯವಹರಣೆ ಹೂಡಿದ್ದಾನೆ ಅಥ–ವಾ ಮೇಲಿನ ನ್ಯಾಯಾಲಯವು ಕ್ರಿಮಿನಲ್ ನ್ಯಾಯಾಲಯದ ದಂಡನೆ ಆದೇಶವನ್ನು ನಿಲಂಬನೆಯಲ್ಲಿಟ್ಟಿದ ಅಥವಾ ಆತನ ಮೇಲ್ಮನವಿ ಇತ್ಯರ್ಥದಲ್ಲಿರುವಾಗ ಜಾಮೀನಿನ ಮೇಲೆ ಬಿಡುಗಡೆ ಪಡೆದಿದ್ದಾನೆ ಎಂಬ ಕಾರಣಕ್ಕಾಗಿ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14(i) ರನ್ನಯ ಕ್ರಮ ಜರುಗಿಸುವುದನ್ನು ತಡೆ ಹಿಡಿಯದೆ ಸಂವಿಧಾನದ 311(2) ರಡಿ ಎರಡನೇ ಪರಂತುಕದ ಸಮರ್ಥನೆ ಪಡೆದಿರುವ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14(i) ರನ್ವಯ ಶಿಸ್ತಿನ ಕ್ರಮ ಕೈಗೊಳ್ಳತಕ್ಕದ್ದು ಎಂದು ಮತ್ತೊಮ್ಮೆ ಸ್ಪಷ್ಟಪಡಿಸಲಾಗಿದೆ.

ಉಲ್ಲೇಖಿತ ದಿನಾಂಕ: 26.6.1996ರ ಸುತ್ತೋಲೆ ಹಾಗೂ ಮೇಲೆ ನೀಡಲಾದ ಸೂಚನೆಗಳನ್ನು ಉಲ್ಲಂಘಿಸುವ ಪ್ರಕರಣಗಳಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನಿನ ಪ್ರಕಾರ ಕ್ರಮ ಜರುಗಿಸತಕ್ಕದ್ದು. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ, ಪ್ರಧಾನ ಕಾರ್ಯದರ್ಶಿ ಮತ್ತು ಕಾರ್ಯದರ್ಶಿಯವರು ಈ ಸೂಚನೆಗಳನ್ನು ಅವರವರ ಕಾರ್ಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ನೇಮಕಾತಿ ಮತ್ತು ಶಿಸ್ತುಪ್ರಾಧಿಕಾರಿಗಳ ಗಮನಕ್ಕೆ ತರಲು ಸೂಚಿಸಿದೆ.

## ಕೇರಳ ವ್ಯಕ್ತಿಗೆ ರಾಜ್ಯ ಸರ್ಕಾರದಿಂದ ಪರಿಹಾರ: ಬಿಜೆಪಿಗೆ ಸಚಿವ ಖರ್ಗೆ ತಿರುಗೇಟು

ಬೆಂಗಳೂರು: ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಪ್ರತಿನಿಧಿಸುತ್ತಿರುವ ಕೇರಳದ ವಯನಾಡಿನಲ್ಲಿ ಆನೆ ದಾಳಿಗೆ ಪ್ರಾಣ ಕಳೆದುಕೊಂಡ ಅಜೀಶ್ ಎಂಬವರ ಕುಟುಂಬಕ್ಕೆ ಕರ್ನಾಟಕ ಸರ್ಕಾರ 15 ಲಕ್ಷ ರೂ. ಪರಿಹಾರ ನೀಡಿದೆ.

ಇದೀಗ ಇದು ರಾಜಕೀಯ ಆರೋಪ–ಪ್ರತ್ಯಾರೋಪಕ್ಕೆ ಕಾರಣವಾಗಿದೆ. "ಕನ್ನಡಿಗರ ಶ್ರಮದ ದುಡಿಮೆಯ ತೆರಿಗೆ– ರಾಹುಲ್ ಗಾಂಧಿಯ ವಯನಾಡ್‌ನ ಮಡಿಲಿಗೆ" ಎಂದು ಬಿಜೆಪಿ ಟೀಕಿಸಿದೆ. ಇನ್ನು ಇದಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿ, ದಾಳಿ ಮಾಡಿದ್ದ ಆನೆ ಕರ್ನಾಟಕದ್ದು. ಹಾಸನದಲ್ಲಿ ವಶಕ್ಕೆ ಪಡೆದಿದ್ದು, ರೇಡಿಯೋ ಕಾಲರ್ ಕೂಡ ನಮ್ಮ ಇಲಾಖೆಯಿಂದಲೇ ಹಾಕಲಾಗಿತ್ತು. ಅದು ಬೇರೆ ರಾಜ್ಯಕ್ಕೆ ಹೋಗಿ ಒಬ್ಬ ವ್ಯಕ್ತಿ ಮೇಲೆ ದಾಳಿ ಮಾಡಿದ ವರದಿಯಿದೆ.

ವರದಿ ತರೆಸಿ ಮಾನವೀಯತೆ ದೃಷ್ಟಿಯಿಂದ ಪರಿಹಾರ ನೀಡಲಾಗಿದೆ. ಆನೆಯನ್ನ ಸಂಬಾಳಿಸುತ್ತಿದ್ದು ನಮ್ಮ ಕರ್ನಾಟಕ ಸರ್ಕಾರ. ಮಾನವೀಯತೆಯನ್ನ ಮೆರೆಯಬಾರದು ಅಂ–ದ್ರೆ ಬಿಜೆಪಿಯವರಿಗೆ ಏನು ಹೇಳಬೇಕು? ಎಂದು ತಿರುಗೇಟು ನೀಡಿದ್ದಾರೆ.

ಪರಿಹಾರದಿಂದ ನಮ್ಮ ರಾಜ್ಯದ ತೆರೆಗೆ ಬೇರೆ ರಾಜ್ಯಕ್ಕೆ ಹೋಗುತ್ತಿಲ್ವಾ ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಖರ್ಗೆ, ಕನ್ನಡಿಗ–ರಿಗೆ ಆಗುತ್ತಿರುವ ಇರುವ ಅನ್ಯಾಯ 15 ಲಕ್ಷ ರೂ. ಅಲ್ಲ. 1 ಲಕ್ಷ 77 ಕೋಟಿ ರೂ. ಅನ್ಯಾಯ ಆಗುತ್ತಿದೆ. ಅದರ ಬಗ್ಗೆ ಬಿಜೆಪಿಯವರು ಯಾಕೆ ಮಾತನಾಡುವುದಿಲ್ಲ. 15 ಲಕ್ಷದಲ್ಲಿ



ಕನ್ನಡಿಗರಿಗೆ ಅನ್ಯಾಯ ಆಗುತ್ತಿದೆ ಎಂದು ಹೇಳುತ್ತಿದ್ದಾರೆ ಅಲ್ವಾ 1 ಲಕ್ಷ 77 ಕೋಟಿ ರೂ. ಅನ್ಯಾಯ ಆಗಿರುವ ಬಗ್ಗೆ ಯಾಕೆ ಮಾತಾಡುತ್ತಿಲ್ಲ? ಇವರು ನಮ್ಮ ಜೊತೆ ದೆಹಲಿಗೆ ಯಾಕೆ ಬಂದಿಲ್ಲ? ಇವರು ಕನ್ನಡಿಗರ ಪರವಾಗಿಲ್ಲ, ರಾಜಕೀಯ ಬೇಳೆ ಬೇಯಿಸಿಕೊಳ್ಳುತ್ತಿದ್ದಾರೆ. ಪತ್ರದಲ್ಲಿ ಸ್ಪಷ್ಟವಾಗಿ ಬರೆದಿದ್ದಾರೆ. ಓದಲು ಬರುವುದಿಲ್ಲ ಅಂ–ದ್ರೆ ಕೇಳೋಕೆ ಹೇಳಿ ಎಂದು ಟಾಂಗ್ ಕೊಟ್ಟರು. ಇಲ್ಲಿ ಮೃತಪಟ್ಟರೆ 5 ಲಕ್ಷ ರೂ. ಪರಿಹಾರ ಎಂಬ ಕುಮಾರಸ್ವಾಮಿ ಟೀಕೆ ಉತ್ತರಸಿದ ಪ್ರಿಯಾಂಕ್ ಖರ್ಗೆ, ಯಾರು ಯಾರು ಸಿಎಂ ಆಗಿದ್ದಾಗ ಎಷ್ಟು ಬಿಡುಗಡೆ ಮಾಡಿದ್ದಾರೆ ಅಂತ ಪಟ್ಟಿ ಕೊಡಲಿ. ಎಲ್ಲದರಲ್ಲೂ ರಾಜಕೀಯ ಮಾಡುವುದು ಸರಿಯಲ್ಲ ಎಂದು ಕೇರಳದ ವ್ಯಕ್ತಿಗೆ ಪರಿಹಾರ ಕೊಟ್ಟಿರುವುದನ್ನು ಸಮರ್ಥಿಸಿಕೊಂಡರು.

ಸಂತೋಷ್ ಲಾಡ್ ಸಮರ್ಥನೆ: ಇನ್ನು ಇದೇ ವಿಚಾರವಾಗಿ ಸಚಿವ ಸಂತೋಷ್ ಲಾಡ್ ಮಾತನಾಡಿದ್ದು, ಅರಣ್ಯ ಸಚಿವ ಈಶ್ವರ ಖಂಡ್ರೆ ಬರೆದಿರುವ ಪತ್ರದಲ್ಲಿ ಏನಿದೆ ಗೊತ್ತಿಲ್ಲ. ಇದನ್ನೇ ವಿವಾದ ಮಾಡಿ ರಾಜಕೀಯ ಮಾಡುವ ಅಗತ್ಯವಿಲ್ಲ. ಮಾನವೀಯತೆ ದೃಷ್ಟಿಯಿಂದ ಮುತುವರ್ಜಿ ವಹಿಸಿ ಕೊಟ್ಟಿರಬಹುದು. ರಾಹುಲ್ ಹೇಳಿದ್ದರು ಅಂತಾ ಕೊಟ್ಟಿರಬಹುದು, ಮೆಚ್ಚಿಸುವಂಥದ್ದು ಏನಿದೆ? 15 ಲಕ್ಷ ರೂ. ಪರಿಹಾರ ಮೂಲಕ ರಾಹುಲ್ ಗಾಂಧಿಯನ್ನ ಮೆಚ್ಚಿಸಬಹುದಾ? ಎಂದು ಕರ್ನಾಟಕ ಸರ್ಕಾರ ನೀಡಿದ ಪರಿಹಾರವನ್ನು ಸಮರ್ಥಿಸಿಕೊಂಡರು.

# ಬೆಳಗಾವಿ ರಾಣಿ ಚನ್ನಮ್ಮ ವಿವಿಗೆ 100 ಕೋಟಿ ರೂ.ಮಂಜೂರು

ಬೆಳಗಾವಿ: ಕೇಂದ್ರ ಶಿಕ್ಷಣ ಸಚಿವಾಲಯದ ಅಡಿಯಲ್ಲಿರುವ ಉನ್ನತ ಶಿಕ್ಷಣ ಇಲಾಖೆಯ 'ಪ್ರಧಾನ ಮಂತ್ರಿ ಉಚ್ಚತರ್ ಶಿಕ್ಷಾ ಅಭಿಯಾನ್' ಯೋಜನೆಯ 'ವಿಶ್ವವಿದ್ಯಾಲಯಗಳಲ್ಲಿ ಬಹುಶಿಸ್ತೀಯ ಶಿಕ್ಷಣ ಮತ್ತು ಸಂಶೋಧನೆ' (ಎಂಇಆರ್‌ಯು) ಅಡಿ ರಾಜ್ಯದ ಬೆಂಗಳೂರು ವಿಶ್ವವಿದ್ಯಾಲಯ ಮತ್ತು ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ತಲಾ 100 ಕೋಟಿ ಅನುದಾನ ಪಡೆಯಲು ಅರ್ಹತೆ ಪಡೆದಿವೆ.

ಪಿಎಂ–ಉಷಾ ಯೋಜನೆಗೆ ಅನುಮೋದನೆ ನೀಡುವ ಮಂಡಳಿಯ (ಪಿಎಬಿ) ಸಭೆ ಇತ್ತೀಚೆಗೆ ನಡೆದಿದ್ದು, ಅನುದಾನ ಪಡೆಯಲು ಅರ್ಹತೆ ಪಡೆದಿರುವ ವಿಶ್ವವಿದ್ಯಾಲಯಗಳ ಪಟ್ಟಿಯನ್ನು ಕೇಂದ್ರ ಉನ್ನತ ಶಿಕ್ಷಣ ಇಲಾಖೆ ಶನಿವಾರ (ಫೆ. 17) ಬಿಡುಗಡೆ ಮಾಡಿದೆ. ಇದೇ ಮೊದಲ ಬಾರಿಗೆ ರಾಜ್ಯದ ಎರಡು




ವಿಶ್ವವಿದ್ಯಾಲಯಗಳು ಈ ಯೋಜನೆಯಡಿ ದೊಡ್ಡ ಮೊತ್ತದ ಅನುದಾನ ಪಡೆಯಲು ಅರ್ಹ ಆಗಿವೆ.

ಈ ಯೋಜನೆಗೆ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ, 'ವಿಶ್ವವಿದ್ಯಾಲಯಗಳಲ್ಲಿ ಬಹುಶಿಸ್ತೀಯ ಶಿಕ್ಷಣ ಮತ್ತು ಸಂಶೋಧನೆ' (ಎಂಇಆರ್‌ಯು), 'ವಿಶ್ವವಿದ್ಯಾಲಯಗಳ ಬಲವರ್ಧನೆಗೆ ಅನುದಾನ' (ಜಿಎಸ್‌ಯು) ಮತ್ತು 'ಹೊಸ ಮಾದರಿಯ ಪದವಿ ಕಾಲೇಜುಗಳು' (ಎನ್‌ಎಂಡಿಸಿ) ಈ ಮೂರು ವಿಭಾಗಗಳಲ್ಲಿ ಬಂದ ಪ್ರಸ್ತಾವಗಳನ್ನು ಪರಿಗಣಿಸಿ ಪಿಎಬಿ ಅನುದಾನ ಹಂಚಿಕೆ ಮಾಡುತ್ತಿದೆ. ಪ್ರಸಕ್ತ ಸಾಲಿನಲ್ಲಿ ಒಟ್ಟು ?30 ಸಾವಿರ ಕೋಟಿಯನ್ನು ಈ ಯೋಜನೆಗಳಿಗೆ ಮೀಸಲಿಡಲಾಗಿದೆ. ದೇಶದ 1,472 ವಿಶ್ವವಿದ್ಯಾಲಯಗಳ ಪೈಕಿ ಕೇವಲ 26 ವಿಶ್ವವಿದ್ಯಾಲಯಗಳು ಮಾತ್ರ ತಲಾ ?100 ಕೋಟಿ ಅನುದಾನ ಪಡೆಯಲು ಆಯ್ಕೆ ಆಗಿವೆ.

ಈ ಯೋಜನೆಯ 'ವಿಶ್ವವಿದ್ಯಾಲಯಗಳ ಬಲವರ್ಧನೆಗೆ ಅನುದಾನ' (ಜಿಎಸ್‌ಯು) ವಿಭಾಗದ ಅಡಿ ಬೆಂಗಳೂರಿನ ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಮಂಗಳೂರು ವಿಶ್ವವಿದ್ಯಾಲಯ, ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ ಮತ್ತು ಕಲಬುರಗಿಯ ಗುಲ್ಬರ್ಗಾ ವಿಶ್ವವಿದ್ಯಾಲಯವು ಅನುದಾನ ಪಡೆಯಲು ಅರ್ಹತೆ ಪಡೆದಿವೆ.

ಕೇವಲ 90 ಪ್ರಸ್ತಾವ: ಹೊಸ ಮಾದರಿಯ ಪದವಿ ಕಾಲೇಜುಗಳು (ಎನ್‌ಎಂಡಿಸಿ) ವಿಭಾಗದಲ್ಲಿ ಅನುದಾನ ಪಡೆಯಲು 90 ಪ್ರಸ್ತಾವಗಳು ಮಾತ್ರ ಪಿಎಬಿಗೆ ಸಲ್ಲಿಕೆ ಆಗಿದ್ದವು. ಯಾವುದೇ ಉನ್ನತ ಶಿಕ್ಷಣ ಸಂಸ್ಥೆ ಇಲ್ಲದ ಜಿಲ್ಲೆಗಳಲ್ಲಿ ಮಾತ್ರ ಹೊಸ ಮಾದ–ರಿಯ ಪದವಿ ಕಾಲೇಜುಗಳಿಗೆ ಈ ಯೋಜನೆಯಡಿ ಅನುದಾನ ನೀಡಲಾಗುವುದು ಎಂಬ ಷರತ್ತು ವಿಧಿಸಲಾಗಿತ್ತು. ಸಲ್ಲಿಕೆಯಾಗಿದ್ದ ಪ್ರಸ್ತಾವಗಳೆಲ್ಲ ಈ ಷರತ್ತಿನ ಕಾರಣಕ್ಕೆ ಅನರ್ಹಗೊಂಡಿವೆ. ಹೀಗಾಗಿ, ಈ ವಿಭಾಗದಲ್ಲಿ ಅನುದಾನ ಪಡೆಯಲು ನಿಗದಿಪಡಿಸಿರುವ ಮಾನದಂಡಗಳನ್ನು ಪರಿಷ್ಕರಿಸಲು ಪಿಎಬಿ ನಿರ್ಧರಿಸಿದೆ.

# ಖಾಲಿ ಶಿಕ್ಷಕರ ಹುದ್ದೆಗಳ ಭರ್ತಿಗೆ ತ್ವರಿತ ಕ್ರಮ: ಸಚಿವ ಮಧುಬಂಗಾರಪ್ಪ

ಬೆಂಗಳೂರು: ಅನುದಾನಿತ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಎಷ್ಟು ಸಾಧ್ಯವೋ ಅಷ್ಟು ಬೇಗ ಭರ್ತಿ ಮಾಡಲು ತ್ವರಿತ ಕ್ರಮ ಕೈಗೊಳ್ಳುವುದಾಗಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಮಧುಬಂಗಾರಪ್ಪ ವಿಧಾನಪ-ರಿಷತ್ಗೆ ತಿಳಿಸಿದರು.

ಸದಸ್ಯರಾದ ಮರಿತಿಬ್ಬೇಗೌಡ ಹಾಗೂ ಸಂಕನೂರ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಸರ್ಕಾರಿ ಶಾಲೆ ಜೊತೆಗೆ ಅನುದಾನಿತ ಶಾಲೆಯನ್ನೂ ಪರಿಗಣಿಸುತ್ತೇವೆ. ಹೈಕೋರ್ಟ್‌ನಲ್ಲಿ ತಡೆಯಾಜ್ಞೆ ಇರುವುದ-ರಿಂದ ನೇಮಕಾತಿ ಪ್ರಕ್ರಿಯೆ ವಿಳಂಬವಾಗಿದೆ ಎಂಬುದನ್ನು ಒಪ್ಪಿಕೊಂಡರು.

ಕಳೆದ ಎಂಟು ವರ್ಷಗಳಿಂದ ನೇಮಕಾತಿಯನ್ನು ಮಾಡಿಕೊಂಡಿಲ್ಲ. ತಡೆಯಾಜ್ಞೆ ತೆರವುಗೊಳಿಸುವ ಸಂಬಂಧ, ಅಡ್ವೋಕೇಟ್ ಜನರಲ್ಜೊತೆ ಚರ್ಚಿಸಲಾಗಿದೆ. ಕಳೆದ ಎಂಟು ತಿಂಗಳಿಂದ ನೇಮಕಾತಿ ಪ್ರಕ್ರಿಯೆ ನಡೆಯುತ್ತಿದೆ. ಮುಖ್ಯಮಂತ್ರಿಗಳ ಜೊತೆ ಚರ್ಚಿಸಿ ಶೀಘ್ರವೇ ನೇಮಕಾತಿ ಮಾಡುತ್ತೇವೆ, ಕೋರ್ಟ್ ಕೇಸ್ ಬಗ್ಗೆ ಕೂಡ ಹೆಚ್ಚು ಗಮನ ಕೊಡುತ್ತೇವೆ ಎಂದು ಹೇಳೀದರು.

ಅನುದಾನಿತ ಶಾಲೆಗಳಿಗೆ ಸಿಬ್ಬಂದಿಗಳನ್ನು ನೇಮಕಾತಿ ಮಾಡುವ ಸಂಬಂಧ ಹಣ-ಕಾಸು ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಅವರಿಂದ ಅನುಮತಿ ಪಡೆಯುವುದಷ್ಟೇ ಬಾಕಿ ಇದೆ. ಸರ್ಕಾರಿ ಹಾಗೂ ಅನುದಾನಿತ ಶಾಲೆ ಎರಡಕ್ಕೂ ಒಂದೇ ಮಾನದಂಡ ಎಂದು ಸ್ಪಷ್ಟಪಡಿಸಿದರು. ಇದಕ್ಕೂ



ಮುನ್ನ ಸಂಕನೂರ ಪ್ರಶ್ನೆ ಕೇಳಿ, ಅನುದಾನಿತ ಶಾಲೆಗಳಲ್ಲಿ ನಿವೃತ್ತಿ, ರಾಜೀನಾಮೆ ಹಾಗೂ ಇನ್ನಿತರೆ ಕಾರಣದಿಂದ 2016ರಿಂದ ಇಲ್ಲಿಯವರೆಗೂ ಎಷ್ಟು ಖಾಲಿ ಹುದ್ದೆ ಇದೆ. ಹುದ್ದೆ ಭರ್ತಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ? ಇದರಿಂದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಕೊರತೆಯಾಗಿದೆ ಎಂದು ಆಕ್ಷೇಪಿಸಿದರು.

ಅನುದಾನಿತ ಶಾಲೆಯಲ್ಲಿ ಸಂಪನ್ಮೂಲದ ಕೊರತೆ ಇರುವುದರಿಂದ ವೇತನದ ಬಗ್ಗೆಯೂ ಗಮನಹರಿಸುತ್ತೇವೆ. ಸಂಜೀವಿನಿ ಮೂಲಕ ವಿಮೆ ಮಾಡುವ ಬಗ್ಗೆಯೂ ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದರು.

ಎಂಟು ವರ್ಷದಿಂದ ನಡೆಯುತ್ತಲೇ ಇದೆ. ಸಮರ್ಪಕ ಉತ್ತರ ಬರುತ್ತಿಲ್ಲ. ಟೀಚರ್ ಇಲ್ಲದೆ ವಿದ್ಯಾರ್ಥಿಗಳು ಕಲಿಕೆಗೆ ಹಿನ್ನಡೆಯಾಗಿದೆ. ಏಡೆಡ್ ಶಾಲೆಗಳ ಶಿಕ್ಷಕರಿಗೆ ವಿಮಾ ಯೋಜನೆ ನೀಡಬೇಕು. ಬೇಕಿದ್ದರೆ ವೇತನದಲ್ಲೇ ಶೇ.50ರಷ್ಟು ಹಿಡಿಯಿರಿ ಎಂದು ಸದಸ್ಯ ಸಂಕನೂರು ಸಲಹೆ ಮಾಡಿದರು.

ಹಣಕಾಸು ಇಲಾಖೆಯಿಂದ ಮಂಜೂರಾದ ಹುದೆಗಳನ್ನೂ ಭರ್ತಿ ಮಾಡಿಲ್ಲ. ಇನ್ನು ಎಷ್ಟು ದಿನ ಕಾಯಬೇಕು? ಹೈಕೋರ್ಟ್ ಹೇಳಿದ ಮೇಲೂ ನೇಮಕಾತಿ ಮಾಡಿಲ್ಲ. ಹೈಕೋರ್ಟ್ ಆದ-ೕಶಕ್ಕೆ ಬೆಲೆ ಇಲ್ಲವೇ ಎಂದು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಸಚಿವರು, ಹುದ್ದೆಗಳನ್ನು ತ್ವ-ರಿತವಾಗಿ ಭರ್ತಿ ಮಾಡಲು ನಾನು ಬದ್ಧನಿದ್ದೇನೆ.

ಶೀಘ್ರವೇ ಭರ್ತಿ ಮಾಡುವ ಕೆಲಸ ಆಗಲಿದೆ. ಮಕ್ಕಳಿಗೆ ಶಿಕ್ಷಣ ಕೊಡುವ ಕೆಲಸಕ್ಕೆ ಬದ್ಧ. ಕೋರ್ಟ್ ಆದೇಶದ ಮೂಲಕವೇ ನೇಮಕವಾಗಬೇಕು. ಅದಕ್ಕೆ ನಾವು ಮಧ್ಯಪ್ರವೇಶ ಮಾಡುವುದಿಲ್ಲ ಎಂದು ಸ್ಪಷ್ಟನೆ ನೀಡಿದರು.

ವೇತನದಲ್ಲಿ ಕಡಿತ ಮಾಡಿ ಶಿಕ್ಷಕರಿಗೆ ವಿಮೆ ಯೋಜನೆ ಜಾರಿಗೊಳಿಸುವ ಪ್ರಕ್ರಿಯೆ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳುವುದಾಗಿ ಸಚಿವರು ಭರವಸೆ ನೀಡಿದರು.

# ಸಮಾಜದ ಅಂಕುಡೊಂಕು ತಿದ್ದಿದ ಮಹಾಸಂತ ಸರ್ವಜ್ಞ: ಮೇಯರ್ ಬಿ.ಶ್ವೇತ

ಬಳ್ಳಾರಿ: ವಚನಯುಗದ ತ್ರಿಪದಿ ಬ್ರಹ್ಮ ಸಂತ ಸರ್ವಜ್ಞನು ಸಮಾಜದಲ್ಲಿನ ಅಂಕುಡೊಂಕುಗಳನ್ನು ತಮ್ಮ ತ್ರಿಪದಿ ವಚನಢ ಗಾಯನದ ಮೂಲಕ ತಿದ್ದಿ ಸಮಾನತೆ ಸಾರಿದವರು ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಬಿ.ಶ್ವೇತ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಬಿ.ಡಿ.ಎ.ಎ ಫುಟ್ಬಾಲ್ ಮೈದಾನದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಸಂತಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮವನ್ನು ಸರ್ವಜ್ಞರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸರ್ವಜ್ಞನು ವಚನಕಾಲದ ಶ್ರೇಷ್ಠ ದಾರ್ಶನಿಕ ವಚನಕಾರರಲ್ಲಿ ಒಬ್ಬರಾಗಿದ್ದಾರೆ. ಗಾದೆ ಮಾತಿನಂತೆ ಆಡು ಮುಟ್ಟದ ಸೊಪ್ಪಿಲ್ಲ, ಸರ್ವಜ್ಞರು ರಚಿಸದ ವಚನಗಳಿಲ್ಲ ಎಂದು ಸಂತ ಕವಿಯ ಜೀವನ ಪರಿಚಯ ತಿಳಿಸಿದರು.

ಬೆಂಗಳೂರಿನಿಂದ ಸಮೂಹ ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಚಿಕ್ಕ ವೀರಯ್ಯ ಟಿ.ಎನ್ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಮಣ್ಣಲ್ಲಿ ಚಿನ್ನವನ್ನು ತೆಗೆಯುವ ಶಕ್ತಿ ಕುಂಬಾರ ಸಮುದಾಯದವರಿಗೆ ಇದೆ. ಇವರು ಒಗ್ಗಟ್ಟು, ಒಮ್ಮತ, ಐಕ್ಯತೆ ಭಾವನೆಯಿಂದ ಕೂಡಿರಬೇಕು ಎಂದರು.

ಸರ್ವಜ್ಞನು ಸರ್ವರಲ್ಲಿ ಬೆರೆತು ಕಲಿತ ನಂತರ ಶ್ರೇಷ್ಠ ವಚನಕಾರರಾದವರು ಎಂದು ಸಂತ ಸರ್ವಜ್ಞನ ಜೀವನ ಮತ್ತು ವಚನ ಗಾಯನಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.



ಕಾರ್ಯಕ್ರಮದಲ್ಲಿ ಕೆ.ದೊಡ್ಡಬಸವ ಗವಾಯಿ ತಂಡದಿಂದ ವಚನ ಗಾಯನ ಪ್ರಸ್ತುತ ಪಡಿಸಿದರು.

ಈ ಸಂದರ್ಭದಲ್ಲಿ ಉಪ ಮೇಯರ್ ಬಿ.ಜಾನಕಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಜಿಲ್ಲಾ ಶಾಲಿವಾಹನ ಕುಂಬಾರ ಸಂಘದ ಅಧ್ಯಕ್ಷ ಪಿ.ವಿ.ನರಸಯ್ಯ ಸೇರಿದಂತೆ ಸಮಾಜದ ಮುಖಂಡರು, ಜನ ಪ್ರತಿನಿಧಿಗಳು ಹಾಗೂ ಇನ್ನೀತರರು ಉಪಸ್ಥಿತ-ರಿದ್ದರು.

**ಸಡಗರದ ಮೆರವಣಿಗೆ:**

ಸಂತಕವಿ ಸರ್ವಜ್ಞ ಜಯಂತಿ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ಸಡಗರದಿಂದ ನಡೆಯಿತು. ಮೆರವಣಿಗೆಗೆ ಮಹಾನಗರ ಪಾಲಿಕೆ ಮೇಯರ್ ಬಿ.ಶ್ವೇತ ಅವರು ಚಾಲನೆ ನೀಡಿದರು.

ಮೆರವಣಿಗೆಯು ನಗರದ ಹೆಚ್.ಆರ್.ಗವಿಯಪ್ಪ ವೃತ್ತದ ಬಳಿಯಿಂದ ಆರಂಭವಾಗಿ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಿಂದ ಗಡಿಗಿ ಚೆನ್ನಪ್ಪ ವೃತ್ತದ ಮಾರ್ಗವಾಗಿ ಬಿ.ಡಿ.ಎ.ಎ ಫುಟ್ಬಾಲ್ ಮೈದಾನದ ವೇದಿಕೆ ಸಭಾಂಗಣದವರೆಗು ಸಾಗಿ ಬಂದು ಅಂತ್ಯಗೊಂಡಿತು. ಮೆರವಣಿಗೆಯಲ್ಲಿ ವಿವಿಧ ಸಂಸ್ಕೃತಿ ಕಲಾತಂಡಗಳು ಭಾಗವಹಿಸಿ ಮೆರಗು ನೀಡಿದವು.

## ಸಮ್ಮೇಳನದಲ್ಲಿ ಭಾಗವಹಿಸಲು ವಿಶೇಷ ಬಸ್ ವ್ಯವಸ್ಥೆ, ಆಸಕ್ತರಿಂದ ನೋಂದಣಿಗೆ ಆಹ್ವಾನ

ಬಳ್ಳಾರಿ: ಭಾರತ ಸಂವಿಧಾನ ಅಂಗೀಕಾರಗೊಂಡು 75 ವರ್ಷ ಪೂರೈಸಿದ ಹಿನ್ನಲೆಯಲ್ಲಿ "ಸಂವಿಧಾನ ಜಾಗೃತಿ ಜಾಥಾ" ಎಂಬ ಕಾರ್ಯಕ್ರಮದಡಿಯಲ್ಲಿ ರಾಜ್ಯ ಸರ್ಕಾರವು ಫೆ.25 ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ರಾಷ್ಟ್ರೀಯ ಮಟ್ಟದ ಸಮ್ಮೇಳನ ಏರ್ಪಡಿಸಲಾಗಿದ್ದು, ಸಮ್ಮೇಳನದಲ್ಲಿ ಭಾಗವಹಿಸಲು ಜಿಲ್ಲೆಯಿಂದ ವಿಶೇಷ ಬಸ್ ವ್ಯವಸ್ಥೆ ಮಾಡಲಾಗಿದೆ. ಆಸಕ್ತರು ನೋಂದಾಯಿಸಿಕೊಳ್ಳಬಹುದು ಎಂದು ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಸತೀಶ್ ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಮಟ್ಟದ ಸಮ್ಮೇಳನದಲ್ಲಿ ಭಾಗವಹಿಸಲು ಬಳ್ಳಾರಿ ಜಿಲ್ಲೆಯಿಂದ ತಾಲ್ಲೂಕುವಾರು ಒಟ್ಟು 10 ಬಸ್ಗಳ ವ್ಯವಸ್ಥೆ ಮಾಡಲಾಗಿದ್ದು, ಆಸಕ್ತರು ಭಾಗವಹಿಸಲು ಆಯಾ ತಾಲ್ಲೂಕಿನ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ತಮ್ಮ ಹೆಸರುಗಳನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಕೋಟೆ ಪ್ರದೇಶದ ಆವರಣದ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ಕಚೇರಿ ಮತ್ತು ಸಹಾಯಕ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

## ಬೆಂಗಳೂರಿನಲ್ಲಿ ಬ್ರಹತ್ ಉದ್ಯೋಗ ಮೇಳ ಜಿಲ್ಲೆಯ ಯುವಕ ಯುವತಿಯರಿಗೆ ಅವಕಾಶ

ಧಾರವಾಡ: ಮಾನ್ಯ ಮುಖ್ಯಮಂತ್ರಿಗಳ ಕೌಶಲ್ಯಾಭಿವೃದ್ಧಿ, ಉದ್ಯಮಶೀಲ ಮತ್ತು ಜೀವನೋಪಾಯ ಇಲಾಖೆಯಿಂದ ರಾಜ್ಯ ಮಟ್ಟದ ಯುವ ಸಮೃದ್ಧಿ ಸಮ್ಮೇಳನ ಬ್ರಹತ್ ಉದ್ಯೋಗ ಮೇಳವನ್ನು ಫೆ,26 ರಿಂದ 27 ರ ವರೆಗೆ ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದೆ.

ಮೇಳದಲ್ಲಿ ಭಾಗವಹಿಸುವಂತಹ ಅಭ್ಯರ್ಥಿಗಳು ಎಸ್ಎಸ್ಎಲ್ಸಿ, ಐಟಿಐ, ಡಿಪ್ಲೋಮಾ, ಬಿ.ಕಾಂ. ಬಿ.ಎ.ಬಿಎಸ್ಸಿ, ಬಿ.ಇ, ಎಂಬಿಎ, ಎಂಸಿಎ, ಎಮ್ಎಸ್ಡಬ್ಲೂ ಸೇರಿದಂತೆ ವಿವಿಧ ಪದವಿ ಹಾಗೂ ಸ್ನಾತಕೋತ್ತರ ಪದವಿ ಪಾಸಾದ ಆಸಕ್ತ ಎಲ್ಲ ವಿದ್ಯಾರ್ಥಿಗಳು ತಮ್ಮ ಶೈಕ್ಷಣಿಕ ದಾಖಲೆಗಳೊಂದಿಗೆ ಭಾಗಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ http://udyogamela.skillconnect.kaushalkar.com ಜಾಲತಾಣಕ್ಕೆ ಭೇಟಿ ನೀಡಿ ಮಹಿತಿಯನ್ನು ಪಡೆಯಬಹುದು ಎಂದು ಜಿಲ್ಲಾ ಕೌಶಲ್ಯ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಮ್ಮನ್ನು ನಾವು ಪರಿವರ್ತಿಸಿಕೊಂಡಾಗ ಮಾತ್ರ ಸಾಮಾಜಿಕ ನ್ಯಾಯ: ನ್ಯಾ. ರಾಜೇಶ್ ಎನ್.ಹೊಸಮನಿ




ಬಳ್ಳಾರಿ: ಸಾಮಾಜಿಕ ನ್ಯಾಯ ಪಡೆಯುವಲ್ಲಿ ನಮ್ಮನ್ನು ನಾವು ಪರಾಮರ್ಶಿಸಿಕೊಂಡು ಪರಿವರ್ತನೆ ಹೊಂದಿದಾಗ ಮಾತ್ರ ಸಾಮಾಜಿ-ಕ ನ್ಯಾಯ ಸಿಗುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸಮಾಜ ಕಲ್ಯಾಣ ಇಲಾಖೆ ಮತ್ತು ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ವಿಶ್ವ ಸಾಮಾಜಿಕ ನ್ಯಾಯ ದಿನಾಚರಣೆ ಕಾರ್ಯಕ್ರಮ ಅಂಗವಾಗಿ ಡಾ.ಬಿ.ಆರ್. ಅಂಬೇಡ್ಕರ್‌ವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಭಾರತವು ವಿವಿಧತೆಯಲ್ಲಿ ಏಕತೆ ಹೊಂದಿದ ದೇಶವಾಗಿದೆ. ಸಮಾನತೆಯನ್ನು ಭವ್ಯ ಸಂವಿಧಾನದ ಮೂಲಕ ಎತ್ತಿ ಹಿಡಿದಿದ್ದೇವೆ. ಚಂದ್ರನತ್ತ ಹೋಗಿಬಂದರೂ ಸಹ ನಮ್ಮಲ್ಲಿ ಕೆಲವೆಡೆ ಸಾಮಾಜಿಕ ಅಸಮಾನತೆ ಉಳಿದಿದೆ. ಸಮಾಜದಲ್ಲಿನ ಜಾತಿ, ಭೇದ-ಭಾವ, ಲಿಂಗ ತಾರತಮ್ಯ, ಧರ್ಮ ಅಸಮಾನತೆಗಳನ್ನು ಹೋಗಲಾಡಿಸಿದಾಗ ಮಾತ್ರ ನಿಜವಾದ ಸಾಮಾಜಿಕ ನ್ಯಾಯ ಸಿಗುತ್ತದೆ ಎಂದರು.

ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ.ಹೊನ್ನುರ್ ಅಲಿ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಇಂದಿನ ಯುವ ಪೀಳಿಗೆಯು ಸಂವಿಧಾನವನ್ನು ಕೂಲಂಕುಶವಾಗಿ ಅಧ್ಯಯನ ಮಾಡಬೇಕಿದೆ.

ಸರ್ವ ಶ್ರೇಷ್ಠವಾದ ಭಾರತ ಸಂವಿಧಾನವು ಸುಭದ್ರವಾಗಿದ್ದು, ಸಂವಿಧಾನದ ಆಶಯ ಮತ್ತು ಅದರ ಧ್ಯೇಯೋದ್ದೇಶಗಳನ್ನು ಅಥ-ೖಸಿಕೊಳ್ಳಬೇಕು. ಅದರಂತೆ ಸಂವಿಧಾನದ ಪ್ರಸ್ತಾವನೆಯಲ್ಲಿ ಸಮಾನತೆಯನ್ನು ಅಳವಡಿಸಿಕೊಂಡು ನಮಗೆ ನಾವೇ ಅರ್ಪಿಸಿಕೊಂಡಿದ್ದೇವೆ ಎಂದು ತಿಳಿಸಿದರು.

ಸಮಾನತೆ ಮತ್ತು ಸ್ವಾತಂತ್ರ್ಯ ಇವೆರಡು ದೇಶದ ಕಟ್ಟ ಕಡೆಯ ವ್ಯಕ್ತಿಗೆ ತಲುಪಿದಾಗ ನಿಜವಾದ ಸಾಮಾಜಿಕ ಸಮಾನತೆ ದೊರೆಯುತ್ತದೆ. ಅಸಮಾನತೆಯನ್ನು ತೊಲಗಿಸಬೇಕೆಂದರೆ ಸಮಾನತೆಯ ಹಂಚಿಕೆಯನ್ನು ಕ್ರಮವಾಗಿ ಮಾಡಬೇಕು ಎಂದು ಅಭಿಪ್ರಾಯ ಪಟ್ಟರು.

ಕಾರ್ಯಕ್ರಮದಲ್ಲಿ ಸಂವಿಧಾನ ಜಾ-ರಿಗೊಂಡು 75 ವರ್ಷ ಪೂರೈಸಿದ ಹಿನ್ನಲೆಯಲ್ಲಿ ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನಿ ಅವರು ಭೋಧಿಸಿದರು.

ಈ ಸಂಧರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಬಿ.ಸತೀಶ್, ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಡಾ.ಕೆ.ಹೆಚ್. ಮಂಜುನಾಥ ರೆಡ್ಡಿ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು, ಕಾಲೇಜಿನ ಸಹಾಯಕ ಪ್ರಾಧ್ಯಾಪಕರು, ಉಪನ್ಯಾಸಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತ-ರಿದ್ದರು.

# ಸರ್ವಜ್ಞನ ತ್ರಿಪದಿಗಳು ಕನ್ನಡ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆಯಾಗಿದೆ: ಗೀತಾ ಸಿ.ಡಿ



ಧಾರವಾಡ: 16ನೇ ಶತಮಾನದಲ್ಲಿ ಕರ್ನಾಟಕ ಕಂಡ ಒಬ್ಬ ಶ್ರೇಷ್ಠ ಶಿವಶರಣ ವಚನಕಾರ, ದಾರ್ಶನಿಕ ಕವಿ ಸರ್ವಜ್ಞ ತ್ರಿಪದಿಗಳನ್ನು ರಚಿಸುವ ಮೂಲಕ ವಚನ ಸಾಹಿತ್ಯಕ್ಕೆ ಅಪಾರ ಕೊಡುಗೆಗಳನ್ನು ನೀಡಿದ್ದಾರೆ. ಸರ್ವಜ್ಞನ ತ್ರಿಪದಿಗಳು ಕನ್ನಡ ಸಾಹಿತ್ಯಕ್ಕೆ ಅಮೂಲ್ಯ ಕೊಡುಗೆಯನ್ನ ನೀಡಿದೆ ಎಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ ಅವರು ಹೇಳಿದರು.

ಅವರು ಫೆ.20 ಬೆಳಿಗ್ಗೆ ನಗರದ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಂಸ್ಕೃತಿ ಭವನದಲ್ಲಿ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಕಾರದಲ್ಲಿ ಆಯೋಜಿಸಿದ್ದ ಸಂತಕವಿ ಶ್ರೀ ಸರ್ವಜ್ಞ ಜಯಂತಿ ಕಾರ್ಯಕ್ರಮವನ್ನು ಸಂತಕವಿ ಶ್ರೀ ಸರ್ವಜ್ಞ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಮಾತನಾಡಿದರು.

ಸರ್ವಜ್ಞ ಎಂದರೆ ಎಲ್ಲವನ್ನು ತಿಳಿದವನು. ಸಮಾಜದ ಜ್ಞಾನವನ್ನು ಅರಿತವನು. ಸರ್ವಜ್ಞ ಕವಿಯು ಜೀವನದ ನೈತಿಕತೆ, ವಿದ್ಯೆ, ಕೃಷಿ ಹಾಗೂ ಜೀವನದ ಕುರಿತ ಆಳವಾದ ಜ್ಞಾನವನ್ನು ಬೆಳಸಿಕೊಳ್ಳುವುದರ ಮೂಲಕ ದೊಡ್ಡ ವ್ಯಕ್ತಿತ್ವವನ್ನು ಹೊಂದಿದ್ದರು ಎಂದು ಅವರು ಹೇಳಿದರು.

ಸರ್ವಜ್ಞ ಸಮಾಜ ಸುಧಾರಣೆಗೆ ವೈವಿಧ್ಯಮಯ ವಿಚಾರಗಳು, ವಚನಗಳು ಹಾಗೂ ಕನ್ನಡ ಸಾಹಿತ್ಯಕ್ಕೆ ಅಪರ ಕೊಡುಗೆಯನ್ನು ನೀಡಿದ್ದಾರೆ. ಸರ್ವಜ್ಞನ ವಿಚಾರಧಾರೆಗಳು ವಿದ್ಯಾರ್ಥಿಗಳಿಗೆ ಮಾದರಿ ಆಗಬೇಕು. ವಿದ್ಯಾರ್ಥಿಗಳು ಕೇವಲ ಅಂಕಪಟ್ಟಿ ಪಡೆಯಲು ವಿದ್ಯಾಭ್ಯಾಸ ಮಾಡುವುದಲ್ಲದೆ ಜೀವನದಲ್ಲಿ ಮೌಲ್ಯ, ಆದರ್ಶ, ನೈತಿಕತೆಯನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಮನಸ್ಸಿದ್ದರೆ ಮಾರ್ಗ ಎನ್ನುವ ವಿಚಾರ ಎಲ್ಲ-ರಿಗೂ ತಿಳಿದಿದೆ ಆದರಿಂದ ವಿದ್ಯಾರ್ಥಿಗಳು ಉತ್ತಮ ಮನಸ್ಸಿನಿಂದ ವಿದ್ಯಾಭ್ಯಾಸ ಮಾಡಬೇಕು. ಅಭ್ಯಾಸ ಮಾಡುವುದಕ್ಕೆ ಶಾಂತಿಯ ಸ್ಥಳ ಹಾಗೂ ಮನಸ್ಸು ಇರಬೇಕು. ಆಸ್ತಿ-ಅಂತಸ್ತು ಕಳತನ ಮಾಡಬಹುದು ಆದರೆ ವಿದ್ಯಾಭ್ಯಾಸದಿಂದ ಪಡೆದ ಜ್ಞಾನವನ್ನು ಯಾರು ಕಳತನ ಮಾಡಲು ಸಾಧ್ಯವಿಲ್ಲ. ಕಲಿಕೆಯೂ ಒಂದು ನಿರಂತರ ಪ್ರಕ್ರಿಯೆಯಾಗಿದೆ ಎಂದು ಅವರು ತಿಳಿಸಿದರು.

ರಾಯಾಪುರದ ಜಿ.ಟಿ.ಟಿ.ಸಿ ಪ್ರಾಂಶುಪಾಲ ಶಿವಾನಂದ ಬ. ಕುಂಬಾರ ಅವರು ವಿಶೇಷ ಉಪನ್ಯಾಸ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ ಅವರು ನಿರೂಪಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಕರ್ನಾಟಕ ಪ್ರದೇಶ ಕುಂಬಾರ ಸಂಘದ ಅಧ್ಯಕ್ಷ ಬಸವಂತಪ್ಪ ಚಕ್ರಸಾಲಿ, ನಿವೃತ್ತ ನ್ಯಾಯಾಧೀಶ ಜಿ. ಎಂ. ಕುಂಬಾರ ಹಾಗೂ ಎಂ.ಎಂ. ಕಲ್ಬುರ್ಗಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ನ ಅಧ್ಯಕ್ಷ ವೀರಣ್ಣ ರಾಜು ಮತ್ತು ಸಮಾಜದ ಹಿರಿಯರು, ನಾಗರಿಕರು, ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತ-ರಿದ್ದರು.

# ಸಮಾನತೆ ತರುವಲ್ಲಿ ಸಂವಿಧಾನ ಮಹತ್ತರ ಪಾತ್ರ

ಬಳ್ಳಾರಿ: ಸಮಾಜದಲ್ಲಿ ಸಮಾನತೆ ತರಲು ಸಂವಿಧಾನವು ಪ್ರಮುಖ ಕಾರಣವಾಗಿದೆ. ಹಾಗಾಗಿ ಪ್ರತಿಯೊಬ್ಬರೂ ಸಂವಿಧಾನವನ್ನು ಅರಿಯಬೇಕು ಎಂದು ಭುಜಂಗ ನಗರ ಗ್ರಾಮದ ಗ್ರಾಮ ಪಂಚಾಯಿತಿ ಅಧ್ಯಕ್ಷ ಬಿ.ಜಿ.ಪ್ರಕಾಶ ಗೌಡ ಅವರು ಹೇಳಿದರು.

ಜಿಲ್ಲೆಯ ಸಂಡೂರು ತಾಲ್ಲೂಕಿನಲ್ಲಿ ಸಂಚರಿಸುತ್ತಿರುವ "ಸಂವಿಧಾನ ಜಾಗೃತಿ ಜಾಥಾ" ಕಾರ್ಯಕ್ರಮದ ಅಂಗವಾಗಿ ಸೋಮವಾರ ಭುಜಂಗ ನಗರ ಗ್ರಾಮದಲ್ಲಿ ಮೆರವಣಿಗೆಯ ಮೂಲಕ ಸಂಭ್ರಮದಿಂದ ಸ್ವಾಗತಿಸಿ ಬಳಿಕ ಅವರು ಮಾತನಾಡಿದರು.

ಬಳಿಕ, ಸಂಡೂರು ತಾಲ್ಲೂಕಿನ ತಾರಾ ನಗರ, ಭುಜಂಗ ನಗರ, ನರಸಿಂಗಾಪುರ, ದೇವಗಿರಿ ಹಾಗೂ ಕೃಷ್ಣಾನಗರ ಗ್ರಾಮ ಪಂಚಾಯಿತಿಗಳ ಮಾರ್ಗದಲ್ಲಿ ಸಂಚರಿಸಿ, ಸಂವಿಧಾನದ ಆಶಯ ಮತ್ತು ಮೌಲ್ಯಗಳನ್ನು ಕುರಿತು ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸಲಾಯಿತು.



ಸಂವಿಧಾನ ರಚನಾ ಸಭೆ ಹಾಗೂ ಸಂವಿಧಾನದ ಕುರಿತ ವೀಡಿಯೋ ತುಣುಕುಗಳನ್ನು ಸಾರ್ವಜನಿಕರಿಗೆ ಪ್ರದರ್ಶಿಸಲಾಯಿತು ಮತ್ತು ಸಂವಿಧಾನ ಪ್ರಸ್ತಾವನೆಯ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿ ಜಾಥಾದ ಉದ್ದಕ್ಕೂ ಸಂವಿಧಾನ ಪ್ರಸ್ತಾವನೆಯ ಪ್ರತಿಗಳನ್ನು ಹಂಚಿಕೆ ಮಾಡಲಾಯಿತು.

ವಿವಿಧೆಡೆ ಜಾಥಾವನ್ನು ಕಳಶ ಹಿಡಿದ ಮತ್ತು ಪೂರ್ಣ ಕುಂಭ ಹೊತ್ತ ಮಹಿಳೆಯರು, ನೇತಾರರ ವೇಷ ಭೂಷಣಗಳನ್ನು ಧರಿಸಿದ ವಿದ್ಯಾರ್ಥಿಗಳು, ಹಲಗೆ, ಮತ್ತು ಡೊಳ್ಳು ಕಲಾವಿದರು, ಕಂಸಾಳೆ ಹಾಗೂ ನಂದಿ ಕೋಲು ಕುಣಿತದ ಕಲಾವಿದರು, ಶಾಲಾ ಶಿಕ್ಷಕರು ಮತ್ತು ವಿದ್ಯಾರ್ಥಿಗಳು, ಜನಪ್ರತಿನಿಧಿಗಳು, ಊರಿನ ಮುಖಂಡರು ಹಾಗೂ ಸಾರ್ವಜನಿಕರು ಅದ್ದೂರಿಯಾಗಿ ಸ್ವಾಗತಿಸಿದರು.


ದೋಣಿಮಲೈ ಗ್ರಾಮದಲ್ಲಿ ಶಾಲಾ ಮಕ್ಕಳ ಸಾಮೂಹಿಕ ನೃತ್ಯ ಮನಮೋಹಕವಾಗಿತ್ತು. ನಾರಾಯಣಪುರ ಗ್ರಾಮದಲ್ಲಿ ಗ್ರಾಮಸ್ಥರು ಡ್ರಮ್ಸ್ ಸೆಟ್ ಮೂಲಕ ವಿಶೇಷವಾಗಿ ಸ್ವಾಗತ ಕೋರಿದರು. ಗ್ರಾಮಸ್ಥರೊಂದಿಗೆ ವಿವಿಧ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಎನ್.ಕೆ.ವೆಂಕಟೇಶ ಅವರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಡೊಳ್ಳು ಕುಣಿತದಲ್ಲಿ ಪಾಲ್ಗೊಂಡಿದ್ದು ಗಮನ ಸೆಳೆಯಿತು.

ಜಾಥಾ ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ವರ್ಗದವರು, ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾ-ರಿಗಳು ಮತ್ತು ಸಾರ್ವಜನಿಕರು ಪಾಲ್ಗೊಂಡಿದ್ದರು.

## ಮುಖ್ಯ ಅರಣ್ಯ ಸಂರಕ್ಷಣಾಧಿಕಾ-ರಿಯಾಗಿ ಚಂದ್ರಶೇಖರ್ ನಾಯಕ್ ಅಧಿಕಾರ ಸ್ವೀಕಾರ

ಬಳ್ಳಾರಿ: ಬಳ್ಳಾರಿ ವಲಯದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯಾಗಿ ಚಂದ್ರಶೇಖರ್ ನಾಯಕ್ ಅವರು ಮಂಗಳವಾರ ಅಧಿಕಾರ ಸ್ವೀಕರಿಸಿದರು.

ಇವರು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ ಕುರುಡಿಹಳ್ಳಿ ಗ್ರಾಮದವರಾಗಿದ್ದಾರೆ.



ಈ ಹಿಂದೆ ಚಾಮರಾಜನಗರ ವಲಯ ಮುಖ್ಯ ಅರಣ್ಯ ಸಂರಕ್ಷಣಾಧಿ ಕಾರಿಯಾಗಿ ಕಾರ್ಯನಿರ್ವಹಿಸಿದ್ದರು.

ನಿಕಟಪೂರ್ವ ಮುಖ್ಯ ಅರಣ್ಯ ಸಂರಕ್ಷಣಾಧಿಕಾ-ರಿಯಾಗಿದ್ದ ಟಿ.ಹೀರಲಾಲ್ ಅವರು ವರ್ಗಾವಣೆಗೊಂಡಿದ್ದು, ಅವರ ಸ್ಥಾನಕ್ಕೆ ಚಂದ್ರಶೇಖರ್ ನಾಯಕ್ ಅವರನ್ನು ನಿಯುಕ್ತಿಗೊಳಿಸಿ ಆದೇಶಿಸಿದೆ ಎಂದು ಪ್ರಕಟಣೆ ತಿಳಿಸಿದೆ.

# ಬಳ್ಳಾರಿಯಲ್ಲಿ ಸಂಭ್ರಮದ ಛತ್ರಪತಿ ಶಿವಾಜಿ ಜಯಂತಿ; ಛತ್ರಪತಿ ಶಿವಾಜಿ ದಕ್ಷ ಆಡಳಿತಗಾರ: ಮೇಯರ್ ಬಿ.ಶ್ವೇತ

ಬಳ್ಳಾರಿ: ಛತ್ರಪತಿ ಶಿವಾಜಿ ಮಹಾರಾಜರು ಭಾರತದ ಅತ್ಯಂತ ಧೈರ್ಯಶಾಲಿ, ಪ್ರಗತಿಪರ ಮತ್ತು ಸಂವೇದನಾಶೀಲ ಆಡಳಿತಗಾರರಲ್ಲಿ ಒಬ್ಬರು. ಅವರು ಮರಾಠ ಸಾಮ್ರಾಜ್ಯದ ಸ್ಥಾಪಕರಾಗಿದ್ದರು. ಸ್ವರಾಜ್ಯ ಮೌಲ್ಯ ಮತ್ತು ಮರಾಠಾ ಪರಂಪರೆಯನ್ನು ತಮ್ಮ ಆಡಳಿತ ಕೌಶಲ್ಯದಿಂದ ಇತಿಹಾಸದಲ್ಲಿ ಅಚ್ಚಳಿಯಾಗಿ ಉಳಿಯುವಂತೆ ಮಾಡಿದವರು ಎಂದು ಮಹಾನಗರ ಪಾಲಿಕೆಯ ಮಹಾಪೌರರಾದ ಬಿ.ಶ್ವೇತ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ರಾಜಕುಮಾರ್ ರಸ್ತೆಯ ಬಿ.ಡಿ.ಎ.ಎ ಫುಟ್ಬಾಲ್ ಮೈದಾನದ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ ಛತ್ರಪತಿ ಶಿವಾಜಿ ಜಯಂತಿ ಕಾರ್ಯಕ್ರಮವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ, ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು.

ಶಿವಾಜಿ ಮಹಾರಾಜರು ತನ್ನ ಮರಾಠ ಸೈನ್ಯದ ಮೂಲಕ ಗೆ-ರಿಲ್ಲಾ ಹೋರಾಟದ ತಂತ್ರಗಳನ್ನು ಪರಿಚಯಿಸಿದ ಮೊದಲ ವ್ಯಕ್ತಿ. ಮೊಘಲರ ವಿರುದ್ಧ ಹಲವಾರು ಯುದ್ಧಗಳನ್ನು ಗೆದ್ದ ಅವರ ಶೌರ್ಯ ಮತ್ತು ತಂತ್ರಗಳಿಗೆ ಹೆಸರುವಾಸಿಯಾಗಿದ್ದರು ಎಂದು




ತಿಳಿಸಿದರು.

ಕರ್ನಾಟಕ ಮರಾಠ ಶ್ರೀ ಛತ್ರಪತಿ ಶಿವಾಜಿ ಮಹಾರಾಜ್ ಸೇನೆಯ ಯುವಘಟಕದ ರಾಜ್ಯಾಧ್ಯಕ್ಷ ವಿನೋದ್ ಎಂ.ಚವ್ಹಾಣ ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಛತ್ರಪತಿ ಶಿವಾಜಿ ಮಹಾರಾಜರ ವೀರಗಾಥೆಗಳು ಇತಿಹಾಸದ ಪುಟಗಳಲ್ಲಿ ಇಂದಿಗೂ ಅಚ್ಚಳಿಯದೆ ಉಳಿದಿದೆ. ಅದರ ಬಗ್ಗೆ ಇಡೀ ದೇಶವು ಜಾಗೃತವಾಗಿದೆ ಎಂದರು.

ಬಳಿಕ ಛತ್ರಪತಿ ಶಿವಾಜಿ ಮಹಾರಾಜರ ಶೌರ್ಯ, ಸ್ವರಾಜ್ಯ ಸಂಕಲ್ಪ, ಗುರು ಭಕ್ತಿ, ರಾಜತಾಂತ್ರಿಕತೆ, ಚಾಣಾಕ್ಷತೆ, ಯುದ್ಧ ನಿಪುಣತೆ, ಮತ್ತು ಯುದ್ಧ ಕೌಶಲ್ಯಗಳು ಹೀಗೆ ಛತ್ರಪತಿ ಶಿವಾಜಿ ಮಹಾರಾಜರ ಬಾಲ್ಯದಿಂದ - ಛತ್ರಪತಿ ಆದವರೆಗಿನ ಯಶೋಗಾಥ-ೕಗಳನ್ನು ಸಾಹಸಗಳನ್ನು, ದಿಟ್ಟತನವನ್ನು ಒಂದೊಂದಾಗಿ ತಿಳಿಯಪಡಿಸಿದರು.

ಕಾರ್ಯಕ್ರಮದಲ್ಲಿ ಜಯತೀರ್ಥ ಜಾಗೀರದಾರ್ ತಂಡದಿಂದ ವಚನ ಗಾಯನ ಪ್ರಸ್ತುತ ಪಡಿಸಿದರು.

ಮಹಾನಗರ ಪಾಲಿಕೆಯ ಉಪಮೇಯರ್ ಬಿ.ಜಾನಕಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಜಿಲ್ಲಾಧ್ಯಕ್ಷರಾದ ಎಂ.ಶಿವಾಜಿರಾವ್ ಸೇರಿದಂತೆ ಸಮಾಜದ ಮುಖಂಡರುಗಳಾದ ಯಶವಂತರಾವ್ ಜಗತಾಪ್, ಅನಿತಾ ಸಾಳುನ್ಕೆ, ನಾಗರಾಜ್ ಚವ್ಹಾಣ್, ದಿನೇಶ್ ನಲವಡೆ, ಶಂಕರ್ ಗಾಯಕವಾಡ್ ಹಾಗೂ ಮುಖಂಡರು, ಇನ್ನೀತರರು ಉಪಸ್ಥಿತರಿದ್ದರು.

ಸಂಭ್ರಮದ ಮೆರವಣಿಗೆ:

ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ಸಂಭ್ರಮದಿಂದ ನಡೆಯಿತು. ಮೆರವಣಿಗೆಯಲ್ಲಿ ಡೊಳ್ಳು ವಾದ್ಯ, ತಾಷೆ ರಾಂಡೋಲ್ ಸೇರಿದಂತೆ ವಿವಿಧ ಸಂಸ್ಕೃತಿ ಕಲಾತಂಡಗಳು ಭಾಗವಹಿಸಿ, ಮೆರಗು ನೀಡಿದವು.

ಮೆರವಣಿಗೆಗೆ ಮಹಾನಗರ ಪಾಲಿಕೆ ಮೇಯರ್ ಬಿ.ಶ್ವೇತಾ ಅವರು ಚಾಲನೆ ನೀಡಿದರು.ಮೆರವಣಿಗೆಯು ಶ್ರೀ ಪಾಂಡುರಂಗ ದೇವಸ್ಥಾನದಿಂದ ಆರಂಭವಾಗಿ ಕಾಳಮ್ಮ ಬೀದಿ ಮೂಲಕ ಹಳೆ ಬ್ರೂಸ್ಪೇಟೆ ಪೊಲೀಸ್ ಠಾಣೆ ಮಾರ್ಗವಾಗಿ ತೇರು ಬೀದಿ, ಹೆಚ್.ಆರ್ ಗವಿಯಪ್ಪ ಮಾರ್ಗವಾಗಿ ಹಳೇ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಿಂದ ಗಡಿಗಿ ಚೆನ್ನಪ್ಪ ವೃತ್ತದ ಮೂಲಕ ಬಿಡಿಎಎ ಫುಟ್ಬಾಲ್ ಮೈದಾನದ ವೇದಿಕೆ ಸಭಾಂಗಣದವರೆಗೆ ಸಾಗಿಬಂದು ಸಂಪನ್ನಗೊಂಡಿತು.

## ಫೇ. 24ರಂದು ಬೆಳಗಾವಿ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ

ಬೆಳಗಾವಿ: ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಫೆಬ್ರವರಿ 24ರಂದು ಮಹಾಂತೇಶ ನಗರದ ಮಹಾಂತ ಭವನದಲ್ಲಿ ಬೆಳಗಾವಿ ತಾಲೂಕು 9 ನೇ ಕನ್ನಡ ಸಾಹಿತ್ಯ ಸಮ್ಮೇಳನ ಏರ್ಪಡಿಸಲಾಗಿದೆ.

ನಗರಸೇವಕ ರಾಜಶೇಖರ ಡೋಣಿ ಅಧ್ಯಕ್ಷತೆ ವಹಿಸಲಿದ್ದಾರೆ. ಬೆಳಗಾವಿಯ ನಿವೃತ್ತ ಯೋಧ ಕ್ಯಾಪ್ಟನ್ ಬಾಳಗೌಡ ಪಾಟೀಲ ರಾಷ್ಟ್ರ ಧ್ವಜಾರೋಹಣ ನೆರವೇರಿಸಲಿದ್ದಾರೆ. ಬೆಳಗಾವಿ ಜಿಲ್ಲಾ ಕಸಾಪ ಅಧ್ಯಕ್ಷೆ ಮಂಗಲಾ ಮೆಟಗುಡ್ಡ ಪರಿಷತ್ತಿನ ಧ್ವಜಾರೋಹಣ ನೆರವೇರಿಸುವರು. ಕಸಾಪ ಬೆಳಗಾವಿ ತಾಲೂಕು ಅಧ್ಯಕ್ಷ ಸುರೇಶ ಹಂಜಿ ನಾಡ ಧ್ವಜಾರೋಹಣ ನೆರವೇರಿಸುವರು. ಬೆಳಗಾವಿ ಕಾರಂಜಿಮಠದ ಶ್ರೀ ಗುರುಸಿದ್ಧ ಸ್ವಾಮೀಜಿ ಸಾನ್ನಿಧ್ಯ ವಹಿಸುವರು.

ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಉದ್ಘಾಟಿಸುವರು. ಜ್ಯೋತಿ ಬದಾಮಿ ಸಮ್ಮೇಳನದ ಸರ್ವಾಧ್ಯಕ್ಷತೆ ವಹಿಸಲಿದ್ದಾರೆ. ಶಾಸಕ ಆಸೀಫ್ (ರಾಜು) ಸೇಠ ಅಧ್ಯಕ್ಷತೆ ವಹಿಸಲಿದ್ದಾರೆ. ಮಂಗಲಾ ಮೆಟಗುಡ್ಡ ಆಶಯ ನುಡಿಗಳನ್ನಾಡಲಿದ್ದಾರೆ. ಸುರೇಶ ಹಂಜಿ ಪ್ರಾಸ್ತಾವಿಕ ನುಡಿಗಳನ್ನಾಡಲಿದ್ದಾರೆ.

ಸಂಸದೆ ಮಂಗಳಾ ಅಂಗಡಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ, ಶಾಸಕರಾದ ಅಭಯ ಪಾಟೀಲ, ಪ್ರಕಾಶ ಹುಕ್ಕೇರಿ, ಹಣಮಂತ ನಿರಾಣಿ, ಲಖನ್ ಜಾರಕಿಹೊಳಿ, ಚನ್ನರಾಜ ಹಟ್ಟಿಹೊಳಿ ಉಪಸ್ಥಿತರಿರುವರು. ನಾಗೇಶ ಯಡಾಲ, ಆನಂದ ಬಣಗಾರ, ಶಶಿಕಾಂತ ನಾಯಕ, ಸಿದ್ಧರಾಯಿ ಬೋಸಗಿ, ರಾಜೇಶ ದಾನವಾಡಕರ, ವಿದ್ಯಾವತಿ ಭಜಂತ್ರಿ, ರೇವತಿ ಹೊಸಮಠ, ಮೋಹನ ಹಂಚಾಟೆ, ದಿನೇಶ ನಾಯಕ ಆಗಮಿಸಲಿದ್ದಾರೆ. ಕವಿಗೋಷ್ಠಿ, ಹಾಸ್ಯಗೋಷ್ಠಿ, ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಕ.ಸಾ.ಪ. ಬೆಳಗಾವಿ ಜಿಲ್ಲೆಯ ಎಲ್ಲ ತಾಲೂಕು ಅಧ್ಯಕ್ಷರು, ಹಾಗೂ ಜಿಲ್ಲಾ ಕ.ಸಾ.ಪ. ಕಾರ್ಯಕಾರಿ ಸಮಿತಿಯ ಸರ್ವ ಸದಸ್ಯರು, ಕ.ಸಾ.ಪ. ಸರ್ವ ಸದಸ್ಯರು ಹಾಗೂ ಸಾಹಿತಿಗಳು, ಕಲಾವಿದರು ಮತ್ತು ಕನ್ನಡಪರ ಸಂಘಟನೆಗಳು, ಸಮಸ್ತ ಕನ್ನಡ ಮನಸ್ಸುಗಳು ಎಲ್ಲರೂ ಈ ಕನ್ನಡ ಕಾರ್ಯಕ್ರಮಕ್ಕೆ ಆಗಮಿಸಿ ಶೋಭೆ ತರಬೇಕೆಂದು ಕಸಾಪ ಬೆಳಗಾವಿ ಜಿಲ್ಲಾಧ್ಯಕ್ಷೆ ಮಂಗಲಾ ಮೆಟಗುಡ್ಡ ಮತ್ತು ಸುರೇಶ ಹಂಜಿ ವಿನಂತಿಸಿದ್ದಾರೆ.

## ಅಥಣಿ: ಟ್ರ್ಯಾಕ್ಟರ್ ಗಾಲಿಗೆ ಸಿಲುಕಿ ವಿದ್ಯಾರ್ಥಿ ಸಾವು



ಅಥಣಿ: ಕಬ್ಬು ತುಂಬಿದ ಟ್ಯಾಕ್ಟರ್ ನಲ್ಲಿ ಸಿಲುಕಿ ವಿದ್ಯಾರ್ಥಿಯೊಬ್ಬ ಸಾವನ್ನಪ್ಪಿದ ಘಟನೆ ತಾಲೂಕಿನ ಯಕ್ಕಂಚಿ ಗ್ರಾಮದಲ್ಲಿ ಜರುಗಿದೆ.

ಮೃತಪಟ್ಟ ವಿದ್ಯಾರ್ಥಿ ಯಕ್ಕಂಚಿ ಗ್ರಾಮದ ನಿವಾಸಿಯಾಗಿದ್ದು, ಅಥಣಿ ಪಟ್ಟಣದ ಖಾಸಗಿ ಶಾಲೆ ಒಂದರಲ್ಲಿ ವ್ಯಾಸಂಗ ಮಾಡುತ್ತಿದ್ದ ಸಮರ್ಥ ಪರಶುರಾಮ ಕಾಗವಾಡ (15) ಎಂದು ಗುರುತಿಸಲಾಗಿದೆ. ಸಾಗುತ್ತಿದ್ದ ಕಬ್ಬು ತುಂಬಿದ ಟ್ಯಾಕ್ಟರ್ ಗೆ ಬೆನ್ನು ಹತ್ತಿ ಕಬ್ಬು ಮುರಿಯಲು ಹೋಗಿ ಟ್ಯಾಕ್ಟರ್ ಟೈಯರ್ ಗೆ ಸಿಲುಕಿ ವಿದ್ಯಾರ್ಥಿ ಸಮರ್ಥ ಮೃತ ಪಟ್ಟಿದ್ದಾರೆ. ಈ ಕುರಿತು ಐಗಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಂವಿಧಾನ ಜಾಗೃತಿ ಜಾಥಾ ಅಂಗವಾಗಿ ಬೆಂಗಳೂರಿನಲ್ಲಿ ಜರುಗಲಿರುವ ಬೃಹತ್ ಸಮಾವೇಶದಲ್ಲಿ ಪಾಲ್ಗೊಳ್ಳಲು ಹೆಸರು ನೋಂದಣಿ

ಧಾರವಾಡ: ಭಾರತ ಸಂವಿಧಾನಕ್ಕೆ 75 ವರ್ಷ ತುಂಬಿದ ಹಿನ್ನಲೆಯಲ್ಲಿ ಭಾರತ ಸಂವಿಧಾನದ ಶ್ರೇಷ್ಠತೆ, ಮಹತ್ವ, ಹಿರಿಮೆ ತಿಳಿಸಲು ಮತ್ತು ಭಾರತ ಸಂವಿಧಾನದ ಬಗ್ಗೆ ಎಲ್ಲ-ರಿಗೂ ಪರಿಚಯ ಮಾಡಿಕೊಡಲು ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮದ ಅಂಗವಾಗಿ ಬೆಂಗಳೂರಿನ ಅರಮನೆ ಮೈದಾನದಲ್ಲಿ ಫೆಬ್ರವರಿ 25, 2024 ರಂದು ನಡೆಯಲಿರುವ ಬೃಹತ ಸಮಾವೇಶದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಮಹಾನಗರ ಪಾಲಿಕೆ ಚುನಾಯಿತ ಸದಸ್ಯರು ಹಾಗೂ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ, ಇತರೇ ವರ್ಗಗಳ ಮುಖಂಡರು ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಪಾಲ್ಗೊಳ್ಳಬಹುದಾಗಿದೆ.

ಫೆಬ್ರವರಿ 24, 2024 ರಂದು ಸಂಜೆ ಜಿಲ್ಲಾ ಕೇಂದ್ರ ಹಾಗೂ ಆಯಾ ತಾಲೂಕಾ ಕೇಂದ್ರ ಸ್ಥಾನಗಳಿಂದ ಬೃಹತ ಸಮಾವೇಶಕ್ಕೆ ಬಸ್ಸುಗಳು ಸಂಚರಿಸುತ್ತಿದ್ದು, ಆಸಕ್ತರು ಸಂವಿಧಾನ ಜಾಗೃತಿ ಜಾಥ ಸಮಾವೇಶದಲ್ಲಿ ಪಾಲ್ಗೊಳ್ಳುವ ಬಗ್ಗೆ ಆಯಾ ತಾಲೂಕಿನ ಸಹಾಯಕ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆಯಲ್ಲಿ ಫೆಬ್ರವರಿ 22, 2024 ರ ಸಂಜೆ 5:30 ರೊಳಗಾಗಿ ಹೆಸರು ನೊಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836-2447201, 9480843032 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಅಪರ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತರ ಕರ್ನಾಟಕಕ್ಕೆ ಕೇಂದ್ರ ಸರ್ಕಾರದಿಂದ ನೂತನ ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣದಲ್ಲಿ ಮಹತ್ವದ ಕೊಡುಗೆ: ಸಂಸದ ಈರಣ್ಣ ಕಡಾಡಿ



ಬೆಳಗಾವಿ: ಬೆಳಗಾವಿ ಸೇರಿದಂತೆ ಉತ್ತರ ಕರ್ನಾಟಕ ಭಾಗದ ಉತ್ತರ ಕನ್ನಡ, ವಿಜಯಪುರ, ಬಾಗಲಕೋಟೆ, ಕೊಪ್ಪಳ, ರಾಯಚೂರ, ಕಲಬುರಗಿ, ಬೀದರ ಈ ಎಲ್ಲ ಜಿಲ್ಲೆಗಳಿಗೆ ಸುಮಾರು 376 ಕಿ.ಮೀ ಉದ್ದದ ಮತ್ತು 6975 ಕೋಟಿ ರೂ.ಗಳ ವೆಚ್ಚದಲ್ಲಿ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಕಾಮಗಾರಿಗಳಿಗೆ ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರು ದಿನಾಂಕ 22 ಫೆಬ್ರವರಿ 2024 ರಂದು ಗುರುವಾರ ಮಧ್ಯಾಹ್ನ 12.00 ಗಂಟೆಗೆ ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ತಿಳಿಸಿದ್ದಾರೆ.

**ಬೆಳಗಾವಿ ಜಿಲ್ಲೆ**

ಬೆಳಗಾವಿ ನಗರದಲ್ಲಿ 1622.04 ಕೋಟಿ ವೆಚ್ಚದಲ್ಲಿ 34.48 ಕಿಮೀ ಉದ್ದದ 4/6 ಪಥದ ವರ್ತುಲ್ (ರಿಂಗ್) ರಸ್ತೆ ನಿರ್ಮಾಣ ಕಾಮಗಾರಿಗೆ ಚಾಲನೆ ನೀಡಲಿದ್ದಾರೆ.

ರಾಷ್ಟ್ರೀಯ ಹೆದ್ದಾರಿ 548 ಬಿ ಚಿಕ್ಕೋಡಿ ಬೈಪಾಸ್‌ನಿಂದ -ಗೋಟೂರುವರೆಗೆ 941.61 ಕೋಟಿ ವೆಚ್ಚದಲ್ಲಿ 27.12 ಕಿ.ಮೀ ಉದ್ದದ ಚತುಷ್ಪಥ ರಸ್ತೆ ನಿರ್ಮಾಣ ಕಾಮಗಾರಿ.

ಶಿರಗುಪ್ಪಿಯಿಂದ ಅಂಕಲಿವರೆಗೆ 887.32 ಕೋಟಿ ವೆಚ್ಚದಲ್ಲಿ 10 ಕಿ.ಮೀ ಉದ್ದದ ರಸ್ತೆ ಅಗಲೀಕರಣ.

ಮುರಗುಂಡಿಯಿಂದ ಚಿಕ್ಕೋಡಿ ಹತ್ತಿರವರೆಗೆ 785.79 ಕೋಟಿ ವೆಚ್ಚದಲ್ಲಿ 50.2 ಕಿ.ಮೀ ಉದ್ದದ ರಸ್ತೆ ಅಗಲೀಕರಣ ಕಾಮಗಾರಿಗೆ ಚಾಲನೆ ಸಿಗಲಿದೆ. ಒಟ್ಟು ಬೆಳಗಾವಿ ಜಿಲ್ಲೆಯಲ್ಲಿ 4237.12 ಕೋಟಿ ರೂ ವೆಚ್ಚದ 121.8 ಕಿ.ಮೀ ಉದದ್ದ ರಸ್ತೆಗಳನ್ನು ಒಳಗೊಂಡಿದೆ ಎಂದರು.

**ಉತ್ತರ ಕನ್ನಡ ಜಿಲ್ಲೆ**

ಅರಬೈಲ್‌ನಿಂದ ಇಡಗುಂಡಿ ವಿಭಾಗದವರೆಗೆ 31.9 ಕೋಟಿ ವೆಚ್ಚದಲ್ಲಿ 16 ಕಿ.ಮೀ ಉದ್ದದ ರಾಷ್ಟ್ರೀಯ ಹೆದ್ದಾ-ರಿಗಳ ಕಾಮಗಾರಿ.

**ವಿಜಯಪುರ ಜಿಲ್ಲೆ**

ಮಹಾರಾಷ್ಟ್ರ ಮತ್ತು ಕರ್ನಾಟಕ ಗಡಿಯ ರಾಷ್ಟ್ರೀಯ ಹೆದ್ದಾರಿ-166ಇ ವಿಜಯಪುರ ಐಬಿ ಸರ್ಕಲ್ ನಿಂದ ಮಹಾರಾಷ್ಟ್ರದ ಮುರ್ರುಮ್ ಗಡಿಯವರೆಗೆ 657.09 ಕೋಟಿ ವೆಚ್ಚದಲ್ಲಿ 102.31 ಕಿ.ಮೀ ಉದ್ದದ ದ್ವಿಪಥ ರಸ್ತೆ ಅಗಲೀಕರಣ ಕಾಮಗಾರಿ

ಕನಮಡಿಯಿಂದ ಬಿಜ್ಜೋಡಿ ಮತ್ತು ತಿಕೋಟಾವರೆಗೆ 23.31 ಕಿ.ಮೀ ದ್ವಿಪಥ ರಸ್ತೆಯು ರೂ.196.5 ಕೋಟಿ ಹಣದಲ್ಲಿ ವಿಸ್ತರಣೆಯಾಗಲಿದೆ.

**ಬಾಗಲಕೋಟ ಜಿಲ್ಲೆ**

ಸರ್ಜಾಪುರದಿಂದ ಪಟ್ಟಣದಕಲ್ಲವರೆಗೆ 26 ಕಿ.ಮೀ ಉದ್ದರ ಹೆದ್ದಾರಿ ದ್ವಿಪಥಕ್ಕೆ 340.641 ಕೋಟಿ ವೆಚ್ಚದಲ್ಲಿ ನಿರ್ಮಾಣವಾಲಿದೆ.

**ಕೊಪ್ಪಳ ಜಿಲ್ಲೆ**

ರಾಷ್ಟ್ರೀಯ ಹೆದ್ದಾರಿ 150 ಎ ಮಸ್ಕಿ & ಸಿಂದೂರು ಬೈಪಾಸ್ 406.73 ಕೋಟಿ ವೆಚ್ಚದಲ್ಲಿ 20.1 ಕಿ.ಮೀ ಉದ್ದದ ಬೈಪಾಸ್ ನಿರ್ಮಾಣವಾಗಲಿದೆ ಹಾಗೂ 146.64 ಕೋಟಿ ವೆಚ್ಚದಲ್ಲಿ 13.8 ಕಿ.ಮೀ ಉದ್ದದ ವೆಂಕಟೇಶ್ವರ ಕ್ಯಾಂಪ್ ನಿಂದ ದಡೇಸುಗೂರು ಕ್ಯಾಂಪ್‌ವರೆಗೆ ದ್ವಿಪಥ ರಸ್ತೆ ಅಗಲೀಕರಣ.

ರಾಷ್ಟ್ರೀಯ ಹೆದ್ದಾರಿ 367ರಲ್ಲಿ ಭಾನಾಪುರ-ಗದ್ದನಕೇರಿ ವಿಭಾಗದ ಕುಕನೂರು, ಯಲಬುರ್ಗಾ ಹಾಗೂ ಗಜೇಂದ್ರಗಡದಲ್ಲಿ 253.75 ಕೋಟಿ ವೆಚ್ಚದಲ್ಲಿ 17.3 ಕಿ.ಮೀ ಉದ್ದದ ಬೈಪಾಸ್ ನಿರ್ಮಾಣವಾಗಲಿದೆ.

**ರಾಯಚೂರ ಜಿಲ್ಲೆ**

ಯಾದಗಿರಿ ಹತ್ತಿರದ ರಾಷ್ಟ್ರೀಯ ಹೆದ್ದಾರಿ 150ರ 8.75 ಕಿ.ಮೀ ಉದ್ದದ 136.29 ಕೋಟಿ ವೆಚ್ಚದಲ್ಲಿ ಬೈಪಾಸ್ ನಿರ್ಮಾಣವಾಗಲಿದೆ.

**ಬೀದರ ಜಿಲ್ಲೆ**

ಚಿಂಚೋಳಿಯಿಂದ ತೆಲಂಗಾಣದ ಗಡಿ ಮಿರಿಯಾಣ ತನಕ 405.3 ಕೋಟಿ ವೆಚ್ಚದಲ್ಲಿ 15.8 ಕಿ. ಮೀ ಉದ್ದದ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ.

**ಕಲಬುರಗಿ ಜಿಲ್ಲೆ**

125.15 ಕೋಟಿ ರೂ.ಗಳ ವೆಚ್ಚದಲ್ಲಿ ರಾಷ್ಟ್ರೀಯ ಹೆದ್ದಾರಿ 150ಇ ವ್ಯಾಪ್ತಿಯ ಚೌಡಾಪುರ ಗ್ರಾಮ, ಅಫಜಲಪುರ ಪಟ್ಟಣ ಮತ್ತು ಬಲ್ಲೂರ್ಗಿ ಗ್ರಾಮದಿಂದ 7.73 ಕಿ.ಮೀ ಉದ್ದದ ದ್ವಿಪಥ ರಸ್ತೆಗೆ ಮರು ಜೋಡಣೆ ಕಾಮಗಾರಿ.

ಈ ಎಲ್ಲ ರಸ್ತೆಗಳ ಶಂಕು ಸ್ಥಾಪನೆಯನ್ನು ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರು ಬೆಳಗಾವಿಯಲ್ಲಿ ನೇರವೇರಿಸುವ ಮೂಲಕ ಉತ್ತರ ಕರ್ನಾಟಕ ಭಾಗದ ರಸ್ತೆಗಳ ಅಭಿವೃದ್ದಿಗೆ ಒತ್ತು ನೀಡಿದ್ದಾರೆ ಎಂದು ಸಂಸದ ಈರಣ್ಣ ಕಡಾಡಿ ಅವರು ಕೇಂದ್ರ ಸರ್ಕಾರದ ಕಾರ್ಯವನ್ನು ಮುಕ್ತಕಂಠದಿಂದ ಪ್ರಶಂಸಿದ್ದಾರೆ.

## ನೂತನ ಇಓ ಆಗಿ ರಾಮರಡ್ಡಿ ಪಾಟೀಲ್ ಅಧಿಕಾರ ಸ್ವೀಕಾರ



ಬೆಳಗಾವಿ: ತಾಲ್ಲೂಕ ಪಂಚಾಯತ ನೂತನ ಕಾರ್ಯನಿರ್ವಾಹಕ ಅಧಿಕಾರಿಯಾಗಿ ರಾಮ ರಡ್ಡಿ ಪಾಟೀಲ್ ಅವರು ಫೆಬ್ರವರಿ 20 ರಂದು ಮಂಗಳವಾರ ಅಧಿಕಾರ ಸ್ವೀಕರಿಸಿದರು.

ಇದೆ ವೇಳೆ ಅಧಿಕಾರ ಸ್ವೀಕರಿಸಿ ಮಾತನಾಡಿದ ಅವರು, ಮಾರ್ಚ ತಿಂಗಳು ಹತ್ತಿರ ಬರುತ್ತಿರುವದ-ರಿಂದ ತಾಲ್ಲೂಕ ಪಂಚಾಯತ ಸಿಬ್ಬಂದಿಗಳು ಅತೀ ವೇಗವಾಗಿ ಕಾರ್ಯನಿರ್ವಹಿಸಬೇಕು.

ಯಾವುದೇ ಕಾರಣಕ್ಕೂ ಕಚೇರಿ ಕೆಲಸಗಳು ಬಾಕಿ ಉಳಿಯಬಾರದು ಎಂದು ಸಿಬ್ಬಂದಿಗಳಿಗೆ ಸೂಚಿಸಿದರು.

ತಾಲ್ಲೂಕ ಪಂಚಾಯತ ವ್ಯವಸ್ಥಾಪಕ ರಾಜೇಂದ್ರ ಮೊರಬದ, ತಾಲ್ಲೂಕಾ ಯೋಜನಾಧಿಕಾರಿ ಎನ್. ಎಸ್. ಹೂಗಾರ, ತಾಂತ್ರಿಕ ಸಂಂ-ೋಜಕ ನಾಗರಾಜ ಯರಗುದ್ದಿ, ಎಮ್‌ಐಎಸ್ ಸಂಯೋಜಕ ಶೀತಲ ಪಾಟೀಲ ತಾಐಇಸಿ ಸಂಯೋಜ-ಕ ರಮೇಶ ಮಾದರ ಸೇರಿದಂತೆ ತಾಲ್ಲೂಕ ತಾಂತ್ರಿಕ ಹಾಗೂ ಆಡಳಿತ ಸಿಬ್ಬಂದಿಗಳು ಇದ್ದರು.

## ಲೋಕಸಭೆ ಚುನಾವಣೆ ಮತದಾನ ಜಾಗೃತಿ ಮೂಡಿಸಿ: ಜಿಪಂ ಸಿಇಓ ರಾಹುಲ್ ಶಿಂಧೆ



ಬೆಳಗಾವಿ: ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಮತದಾರರಿಗೆ ಮತದಾನದ ಕುರಿತು ಜಾಗೃತಿ ಮೂಡಿಸಬೇಕು. ಮತದಾರರ ಪಟ್ಟಿಗಳನ್ನು ಪರಿಷ್ಕರಣೆ ಮಾಡಬೇಕು. ವಯಸ್ಕರ ಮತದಾರರ ಪಟ್ಟಿಗಳ ಮಾಹಿತಿ ಸಂಗ್ರಹಿಸಬೇಕು ಎಂದು ಜಿಪಂ ಸಿಇಓ ರಾಹುಲ್ ಶಿಂಧೆ ಸೂಚನೆ ನೀಡಿದರು.

ಚಿಕ್ಕೋಡಿ ಪಟ್ಟಣದ ಉಪವಿಭಾಗಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಮಂಗಳವಾರ (ಫೆ.20) ಚಿಕ್ಕೋಡಿ ಲೋಕಸಭಾ ಚುನಾವಣೆ ಕುರಿತು ನಡೆದ ಪೂರ್ವ ಸಿದ್ಧತೆಯ ಸಭೆಯಲ್ಲಿ ಅವರು ಮಾತನಾಡಿದರು.

ಮತಗಟ್ಟೆಗಳನ್ನು ಸರಿಯಾಗಿ ಪರಿಶೀಲನೆ ಮಾಡಬೇಕು. ಒಂದು ವೇಳೆ ದುರಸ್ತಿ ಇದ್ದಲ್ಲಿ ಸರಿಪಡಿಸಿಕೊಳ್ಳಬೇಕು. ಸೂಕ್ಷ್ಮ, ಅತೀ ಸೂಕ್ಷ್ಮ ಮತಗಟ್ಟೆಗಳ ಕಡೆಗೆ ಹೆಚ್ಚು ಗಮನಹರಿಸಬೇಕು ಎಂದು ತಿಳಿಸಿದರು.

ಮತಗಟ್ಟೆ ಅಧಿಕಾರಿಗಳಿಗೆ ಪ್ರಾತ್ಯಾಕ್ಷತೆ ತರಬೇತಿ ನೀಡಬೇಕು. ಮತದಾರರು ಹೆಚ್ಚು ಮತದಾನ ಮಾಡುವ ನಿಟ್ಟಿನಲ್ಲಿ ಸ್ವೀಪ್ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು.

ಲೋಕಸಭೆ ಚುನಾವಣೆಯಲ್ಲಿ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಉತ್ತಮ ರೀತಿಯಲ್ಲಿ ಕೆಲಸ ಮಾಡಬೇಕು.

ಎಲ್ಲ ಅಧಿಕಾರಿಗಳು ತಂಡವಾಗಿ ಕೆಲಸ ಮಾಡುವ ಮೂಲಕ ಚುನಾವಣೆಯನ್ನು ಯಶಸ್ವಿಗೊಳಿಸಬೇಕು ಎಂದರು.

ಚಿಕ್ಕೋಡಿ ಉಪವಿಭಾಗಾಧಿಕಾರಿ ಮಹೆಬೂಬಿ ತಹಶೀಲ್ದಾರ್ ಸಿ.ಎಸ್. ಕುಲಕರ್ಣಿ, ತಾಪಂ ಇಓ ಜಗದೀಶ ಕಮ್ಮಾರ ಹಾಗೂ ತಾಲ್ಲೂಕಾ ಮಟ್ಟದ ಎಆರ್ ಒಗಳು ಇಓಗಳು ಮತ್ತಿತರರು ಉಪಸ್ಥಿತರಿದ್ದರು.

## ಅಕುಮ್ಸ್ ಡ್ರಗ್ಸ್ ಫಾರ್ಮಸ್ಯೂಟಿಕಲ್ಸ್ ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಕೆ

ಹುಬ್ಬಳ್ಳಿ: ಅಕುಮ್ಸ್ ಡ್ರಗ್ಸ್ ಅಂಡ್ ಫಾರ್ಮಾಸ್ಯುಟಿಕಲ್ಸ್ ಲಿಮಿಟೆಡ್ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಎಚ್‌ಪಿ) ನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯು-ರಿಟೀಸ್ ಅಂಡ್ ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಗೆ ಸಲ್ಲಿಸಿದೆ.

ಎಫ್ & ಎಸ್ ವರದಿ ಪ್ರಕಾರ, 2023 ರ ಆರ್ಥಿಕ ವರ್ಷದಲ್ಲಿ (ಎಫ್ & ಎಸ್ ಮೌಲ್ಯಮಾಪನ ಮಾಡಿದ ಸಿಡಿಎಂಓಗಳಲ್ಲಿ) ಆದಾಯ, ಉತ್ಪಾದನಾ ಸಾಮರ್ಥ್ಯ ಮತ್ತು ಗ್ರಾಹಕರ ವಿಷಯದಲ್ಲಿ ಕಂಪನಿಯು ಅತಿದೊಡ್ಡ ಭಾರತ-ಕೇಂದ್ರಿತ ಔಷಧೀಯ ಗುತ್ತಿಗೆ ಅಭಿವೃದ್ಧಿ ಮತ್ತು ಉತ್ಪಾದನಾ ಸಂಸ್ಥೆಯಾಗಿದೆ.

ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಗಳ ಮೂಲಕ ಹಣ ಸಂಗ್ರಹಿಸಲು ಕಂಪನಿ ಯೋಜಿಸಿದೆ (ತಲಾ ರೂ2 ಮುಖ ಬೆಲೆಯ) ಈ ಸಂಚಿಕೆ ಪ್ರಸ್ತಾಪವು 680 ಕೋಟಿ ರೂಪಾಯಿಗಳವರೆಗಿನ ಈಕ್ವಿಟಿ ಷೇರುಗಳ ಹೊಸ ಸಂಚಿಕೆ ಮತ್ತು ಷೇರುದಾರರು ಹೊಂದಿರುವ ಷೇರುಗಳನ್ನು ಮಾರಾಟ ಮಾಡುವ ಮೂಲಕ 18,598,365 ಈಕ್ವಿಟಿ ಷೇರುಗಳ ಮಾರಾಟದ ಪ್ರಸ್ತಾಪ ಒಳಗೊಂಡಿದೆ. ಹೊಸ ವಿತರಣೆಯಿಂದ ಬರುವ ನಿವ್ವಳ ಆದಾಯವನ್ನು ಈ ಮುಂದಿನಂತೆ ಬಳಸಿಕೊಳ್ಳಲು ಕಂಪನಿಯು ಪ್ರಸ್ತಾಪಿಸಿದೆ. 1.ನಮ್ಮ ಕಂಪನಿ ಮತ್ತು ಅದರ ಅಂಗಸಂಸ್ಥೆಗಳ ಸಾಲದ ಮರುಪಾವತಿ/ಪೂರ್ವಪಾವತಿ 2. ನಮ್ಮ ಕಂಪನಿಯ ದುಡಿಯುವ ಬಂಡವಾಳ ದ ಅವಶ್ಯಕತೆಗಳಿಗೆ ಧನಸಹಾಯ 3. ಸ್ವಾಧೀನಗಳ ಮೂಲಕ ಅಜೈವಿಕ ಬೆಳವಣಿಗೆಯ ಉಪಕ್ರಮಗಳನ್ನು ಮುಂದುವರಿಸುವುದು 4. ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳು. ಮಾರಾಟದ ಪ್ರಸ್ತಾಪವು ಸಂಜೀವ್ ಜೈನ್ ಅವರ 2,145,965 ಈಕ್ವಿಟಿ ಷೇರುಗಳು, ಸಂದೀಪ್ ಜೈನ್ ಅವರ 2,145,965 ಈಕ್ವಿಟಿ ಷೇರುಗಳು ಮತ್ತು ರೂಬಿ ಕ್ಯೂಸಿ ಇನ್ವೆಸ್ಟ್ಮೆಂಟ್ ಹೋಲ್ಡಿಂಗ್ಸ್ ಪ್ರೈವೇಟ್ ಲಿಮಿಟೆಡ್ ಅವರ 14,306,435 ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ.

ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಮೂಲಕ ನೀಡಲಾಗುವ ಈಕ್ವಿಟಿ ಷೇರುಗಳನ್ನು ಬಿಎಸ್‌ಇ ಲಿಮಿಟೆಡ್ ಮತ್ತು ನ್ಯಾಷನಲ್ ಸ್ಟಾಕ್ ಎಕ್ಸ್ಚೇಂಜ್ ಆಫ್ ಇಂಡಿಯಾ ಲಿಮಿಟೆಡ್ ನಲ್ಲಿ ಪಟ್ಟಿ ಮಾಡಲು ಉದ್ದೇಶಿಸಲಾಗಿದೆ . ಈ ಷೇರು ಮಾರಾಟಕ್ಕೆ ಐಸಿಐಸಿಐ ಸೆಕ್ಯುರಿಟೀಸ್ ಲಿಮಿಟೆಡ್, ಆಕ್ಸಿಸ್ ಕ್ಯಾಪಿಟಲ್ ಲಿಮಿಟೆಡ್, ಸಿಟಿಗ್ರೂಪ್ ಗ್ಲೋಬಲ್ ಮಾರ್ಕೆಟ್ಸ್ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಮತ್ತು ಆಂಬಿಟ್ ಪ್ರೈವೇಟ್ ಲಿಮಿಟೆಡ್ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ ಗಳು ಆಗಿವೆ.

## "ನಾನೇ ಹೀರೋ" ಚಲನ ಚಿತ್ರಕ್ಕೆ ಮುಹೂರ್ತ



ಬೆಂಗಳೂರ : ಬೃಂದ ವಿದ್ಯಾ ಪಿಕ್ಚರ್ಸ್ ಬ್ಯಾನರ್ ನ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಹಾಸ್ಯಮಯ ಚಿತ್ರ "ನಾನೇ ಹೀರೋ".

"ನಿಮಗೇನ್ ಪ್ರಾಬ್ಲಮ್ಮು" ಎಂಬುದು ಇದಕ್ಕೆ ಟ್ಯಾಗ್ ಲೈನ್ ಚಿತ್ರದ ಮುಹೂರ್ತವು ಚಿಂತಾಮಣಿ ತಾಲ್ಲೂಕಿನ ನಲ್ಲಗುಟ್ಲಪಲ್ಲಿ ಸಪ್ತಮಾತೃಕೆಯರ ಸನ್ನಿಧಾನದಲ್ಲಿ ವಿಜೃಂಭಣೆಯಿಂದ ನೆರವೇರಿತು.

ಉಪೇಂದ್ರ ರ ಅಭಿಮಾನಿಯೊಬ್ಬರು ಸಿನಿಮಾ ಇಂಡಸ್ಟ್ರಿಯಲ್ಲಿ ಹೀರೋ ಆಗಬೇಕೆಂದು ಬಂದು ಏನೆಲ್ಲಾ ಕಸರತ್ತು ಮಾಡುತ್ತಾನೆ ಎಂಬ ಕಥಾಹಂದರ ಹೊಂದಿರುವ "ನಾನೇ ಹೀರೋ" ಚಿತ್ರದಲ್ಲಿ ಹೀರೋ ಆಗಿ ನಟಿಸುತ್ತಿರುವ ಅಶೋಕ್ ರವರು ನಿಜವಾಗಿಯೂ ಉಪೇಂದ್ರ ರ ಅಭಿಮಾನಿ ಆಗಿದ್ದು ಅವರ ಜೀವನದ ಕಥೆಯನ್ನೇ ಸ್ಕ್ರೀನ್ ಪ್ಲೇ ಮಾಡಿ ಅದಕ್ಕೆ ಸಂಭಾಷಣೆ ಸಾಹಿತ್ಯ ಬರೆದು ನಿರ್ದೇಶನ ಮಾಡುತ್ತಿದ್ದಾರೆ ಆರ್ ಕೆ ಗಾಂಧಿ.

ಸಮಾಜ ಸೇವಕರಾದ ಚೌಡದೇನಹಳ್ಳಿಯ ಲಕ್ಷ್ಮಿನಾರಾಯಣ ರೆಡ್ಡಿ.... ರವರು ಕೆಮೆರಾ ಸ್ವಿಚ್ ಆನ್ ಮಾಡಿ ಸಿನಿಮಾ ಇಂಡಸ್ಟ್ರಿ ಎಂದರೆ ಬಹಳಷ್ಟು ಮಂದಿಗೆ ಭಯದ ವಾತಾವರಣ ಸೃಷ್ಟಿಯಾಗಿದೆ ಆ ಭಯಕ್ಕೆ ಕಾರಣಗಳೇನು ಎಂಬ ವಿಷಯವನ್ನೇ ಮುಂದಿಟ್ಟುಕೊಂಡು ಸಿನಿಮಾ ಮಾಡುತ್ತಿರುವುದು ಚಿತ್ರತಂಡದ ಧೈರ್ಯ. ಆ ಧೈರ್ಯವನ್ನು ಮೆಚ್ಚಲೇಬೇಕು ಎಂದು ಚಿತ್ರತಂಡಕ್ಕೆ ಶುಭಹಾರೈಸಿದರೆ.

ಹಿರಿಯ ಚಿತ್ರನಿರ್ಮಾಪಕರಾದ ಚಿಂತಾಮಣಿಯ ಬಿ. ಎನ್. ಎಸ್‌ರವರು ಮೊದಲ ದೃಶ್ಯಕ್ಕೆ ಕ್ಲಾಪ್ ಮಾಡುವ ಮೂಲಕ ಚಿತ್ರೀಕರಣ-ಕ್ಕೆ ಚಾಲನೆ ನೀಡಿ, ನಿರ್ದೇಶಕ ಆರ್ ಕೆ ಗಾಂಧಿ ನನಗೆ 20 ವರ್ಷದ ಪರಿಚಯ, ಸೆಟ್‌ನಲ್ಲಿ ಪ್ರತಿ ಕೆಲಸವನ್ನು ತಾನೇ ನಿಭಾಯಿಸುವುದುಲ್ಲದೆ ಸ್ಕ್ರಿಪ್ಟ್ ವಿಷಯದಲ್ಲಿ ತುಂಬಾ ಜಾಗೃತರಾಗಿ-ರ್ತಾರೆ, ಇದೊಂದು ಹೊಸ ಪ್ರಯೋಗ ಇದರಲ್ಲಿ ಚಿತ್ರತಂಡಕ್ಕೆ ಜಯ ಸಿಗಲೆಂದು ಹಾರೈಸಿದರು.

ಹಗದೂರು ಅಶೋಕ್ ರೆಡ್ಡಿ, ಶೋಭ, ಶೋಭರಾಜ್, ಶಶಿಕುಮಾರ್,ಅನ್ಸರ್ ಬಾಬು, ಮಹಾಂತೇಶ ವಿರೂಪಾಕ್ಷಿ ಸಮಯ್ ಮೊದಲಾದವರು ನಟಿಸುತ್ತಿರುವ ನಾನೇ ಹೀರೋ ಚಿತ್ರಕ್ಕೆ ಪ್ರಮೋದ್ ಭಾರತೀಯ ಛಾಯಾಗ್ರಹಣ, ಎಂ ಎಲ್ ರಾಜ ಸಂಗೀತ, ರಾಜೀವ್ ಕೃಷ್ಣ ಗಾಂಧಿ ಸಾಹಿತ್ಯ,ವಿನಯ್ ಸಂಕಲನ ಡಾ. ಪ್ರಭು ಗಂಜಿಹಾಳ ಹಾಗೂ ಡಾ.ವೀರೇಶ್ ಹಂಡಗಿ ರವರ ಪತ್ರಿಕಾ ಸಂಪರ್ಕ ಈ ಚಿತ್ರಕ್ಕಿದ್ದು ಮಾರ್ಚ್ ಮೊದಲ ವಾರದಿಂದ ಒಂದೇ ಶೆಡ್ಯೂಲ್ ನಲ್ಲಿ ಹೊಸಕೋಟೆ, ಚಿಂತಾಮಣಿ, ಮತ್ತು ಗಾಂಧಿನಗರದ ಹಲವು ಸಿನಿಮಾ ಕಛೇರಿಗಳಲ್ಲಿಯೂ ಚಿತ್ರೀಕರಣ ನಡೆಸಲು ಚಿತ್ರತಂಡ ತಯ್ಯಾರಾಗುತ್ತಿದೆ.

ಚಿತ್ರಕ್ಕೆ ಹಗದೂರ ಅಶೋಕ ರೆಡ್ಡಿ, ಮುತ್ಸಂದ್ರ ವೆಂಕಟರಾಮಯ್ಯ,ಸತ್ಯವಾರ್ ನಾಗೇಶ್ ನಿರ್ಮಾಪಕರಾಗಿದ್ದಾರೆ.

## ಗೋಕಾಕ ತಾಲ್ಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘದ ಅವಿರೋಧವಾಗಿ ಆಯ್ಕೆ



ಗೋಕಾಕ: ಇಲ್ಲಿಯ ಗೋಕಾಕ ತಾಲ್ಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘದ ಆಡಳಿತ ಮಂಡಳಿಯ ಎಲ್ಲ ಸ್ಥಾನಗಳಿಗೂ ಅವಿರೋಧವಾಗಿ ಆಯ್ಕೆ ನಡೆದಿದೆ ಎಂದು ಚುನಾವಣಾ ಅಧಿಕಾರಿಯಾಗಿದ್ದ ಸಹಕಾರ ಅಭಿವೃದ್ಧಿ ಅಧಿಕಾರಿ ಬಿ.ಕೆ. ಗೋಖಲೆ ತಿಳಿಸಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ "ಅ" ವರ್ಗದಿಂದ ಸುಣಧೋಳಿಯ ಬಸಪ್ಪ ಲಕ್ಷ್ಮಪ್ಪ ಕುರಿಬಾಗಿ, ಗೊಡಚಿನಮಲ್ಕಿಯ ಮಹಾಂತೇಶ ಬಾಳಪ್ಪ ಅವರಗೋಳ, ಅರಭಾವಿಯ ಮುತ್ತೆಪ್ಪ ಸಣ್ಣಧರೆಪ್ಪ ಜಲ್ಲಿ, ತುಕ್ಕಾನಟ್ಟಿಯ ಸಿದ್ದಪ್ಪ ಶಿವಮೂರ್ತಿ ಹಮ್ಮನವರ, ಸುಭಾಸ ಗಿರೆಪ್ಪ ಢವಳೇಶ್ವರ, ವೈಯಕ್ತಿಕ ಸದಸ್ಯರ "ಬ" ವರ್ಗ ಸಾಮಾನ್ಯ ಕ್ಷೇತ್ರದಿಂದ ಕುಲಗೋಡದ ಅಶೋಕ ಮುದುಕಪ್ಪ ನಾಯಿಕ, ರಾಜಾಪೂರದ ವಿಠ್ಠಲ ಉದ್ದಪ್ಪ ಪಾಟೀಲ, ಮಹಿಳಾ ಕ್ಷೇತ್ರಗಳಿಂದ ಅರಭಾವಿಯ ಗಂಗವ್ವ ಸಾತಪ್ಪ ಜೈನ, ಅಕ್ಕತಂಗೇರಹಾಳದ ಲುಬನಾ ಗೌಸಮೋದ್ದೀನ ದೇಸಾಯಿ, ಹಿಂದುಳಿದ ಅ ಕ್ಷೇತ್ರದಿಂದ ಖಾನಟ್ಟಿಯ ವೆಂಕನಗೌಡ ಬಾಲಗೌಡ ಪಾಟೀಲ, ಬ ವರ್ಗ ಕ್ಷೇತ್ರದಿಂದ ಮೆಳವಂಕಿಯ ಬಸಗೌಡ ದುಂಡನಗೌಡ ಪಾಟೀಲ, ಬ ವರ್ಗ ಪ.ಜಾ.ಯಿಂದ ಮೂಡಲಗಿಯ ಪ್ರಭಾಕರ ತಾ. ರತ್ನವ್ವ ಬಂಗೆನ್ನವರ ಮತ್ತು ಬ ವರ್ಗ ಪ.ಪಂ.ದಿಂದ ಗೋಕಾಕದ ಸುರೇಶ ಭೀಮಶಿ ಗುಡ್ಡಾಕಾರ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಅವರು ಪ್ರಕಟಿಸಿದರು.

ಮುಂದಿನ ಐದು ವರ್ಷ ಅವಧಿಗೆ ಇದೇ ದಿನಾಂಕ 24 ರಂದು ಆಡಳಿತ ಮಂಡಳಿಗೆ ಚುನಾವಣೆ ನಿಗದಿಯಾಗಿತ್ತು.ಎಲ್ಲ ಸ್ಥಾನಗಳಿಗೂ ತಲಾ ಒಬ್ಬೊಬ್ಬರು ನಾಮಪತ್ರಗಳನ್ನು ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆ ನಡೆಸಲಾಯಿತು ಎಂದು ಗೋಖಲೆ ತಿಳಿಸಿದರು.

ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಶಾಸಕರಾದ ರಮೇಶ ಜಾರಕಿಹೊಳಿ, ಬಾಲಚಂದ್ರ ಜಾರಕಿಹೊಳಿ, ವಿಧಾನ ಪರಿಷತ್ ಸದಸ್ಯ ಲಖನ್ ಜಾರಕಿಹೊಳಿಯವರ ಮಾರ್ಗದರ್ಶನದಲ್ಲಿ ಗೋಕಾಕ ತಾಲ್ಲೂಕು ಒಕ್ಕಲುತನ ಹುಟ್ಟುವಳಿ ಮಾರಾಟ ಸಹಕಾರಿ ಸಂಘಕ್ಕೆ ಅವಿರೋಧವಾಗಿ ಆಯ್ಕೆ ನಡೆದಿದೆ.ನೂತನವಾಗಿ ಆಯ್ಕೆಯಾದ ಸದಸ್ಯರನ್ನು ಶಾಸಕ ಬಾಲಚಂದ್ರ ಜಾರಕಿಹೊಳಿಯವರ ಪರವಾಗಿ ಆಪ್ತ ಸಹಾಯಕರಾದ ಲಕ್ಕಪ್ಪ ಲೋಕುರಿ ಮತ್ತು ನಿಂಗಪ್ಪ ಕುರಬೇಟ ಅವರು ಅಭಿನಂದನೆ ಸಲ್ಲಿಸಿದರು.

## ವಿದ್ಯಾರ್ಥಿ ಶವ ಪತ್ತೆ

ಮೈಸೂರು: ನೇಣು ಬಿಗಿದ ಸ್ಥಿತಿಯಲ್ಲಿ ವಿದ್ಯಾರ್ಥಿಯ ಶವ ಪಟ್ಟೆಯಾಗಿರುವ ಘಟನೆ ಮೈಸೂರು ಜಿಲ್ಲೆಯ ಹುಣಸೂರು ತಾಲೂಕಿನ ರತ್ನಪುರಿ ಗ್ರಾಮದಲ್ಲಿ ನಡೆದಿದೆ ಆದರೆ ಕೊಲೆಗೈದು ನೇಣು ಹಾಕಿದ್ದಾರೆ ಎಂದು ಮೃತ ವಿದ್ಯಾರ್ಥಿಯ ಪೋಷಕರು ಆರೋಪಿಸಿದ್ದಾರೆ.

ನೇಣು ಬಿಗಿದ ಸ್ಥಿತಿಯಲ್ಲಿ ವಿದ್ಯಾರ್ಥಿ ಶವ ಪತ್ತೆಯಾಗಿದ್ದು, ವಿದ್ಯಾರ್ಥಿಯನ್ನು ಮುತ್ತುರಾಜ್ ಎಂದು ಗುರುತಿಸಲಾಗಿದೆ. ಆತನನ್ನು ಕೊಲೆಗೈದು ನೇಣು ಹಾಕಿರುವ ಆರೋಪ ಕೇಳಿ ಬರುತ್ತಿದೆ.ದಾಸನಪುರದ ರವಿಕುಮಾರ್ ವಸಂತಿ ದಂಪತಿ ಪುತ್ರ ಮುತ್ತುರಾಜ್ ಎಂದು ಹೇಳಲಾಗುತ್ತಿದೆ.

ಅನ್ಯಕೋಮಿನ ಯುವತಿಯನ್ನು ಮಾತನಾಡಿಸಿದ್ದಕ್ಕೆ ಕೊಲೆ ಮಾಡಲಾಗಿದೆ ಎಂದು ದಂಪತಿಗಳು ಆರೋಪಿಸುತ್ತಿದ್ದಾರೆ. ಯುವತಿಯ ಕಡೆಯ ಯುವಕರು ಹಲ್ಲೆ ನಡೆಸಿ ಕೊಲೆಗೈದಿದ್ದಾರೆ ಎಂದು ಆರೋಪಿಸಿದ್ದಾರೆ. ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಇದೀಗ ಪ್ರಕರಣ ದಾಖಲಾಗಿದೆ.

## ಸರ್ವೀಸ್ ರಿವಾಲ್ವರ್‌ನಿಂದ ಗುಂಡು ಹಾರಿಸಿಕೊಂಡು ಇನ್ಸ್‌ಪೆಕ್ಟರ್ ಆತ್ಮಹತ್ಯೆ



ನಾಸಿಕ್: ಠಾಣೆಯಲ್ಲಿಯೇ ಸರ್ವಿಸ್ ರಿವಾಲ್ವರ್‌ನಿಂದ ಗುಂಡು ಹಾರಿಸಿಕೊಂಡು ಇನ್ಸ್‌ಪೆಕ್ಟರ್ ಆತ್ಮಹತ್ಯೆ ಮಾಡಿಕೊಂಡ ಘಟನೆ ಮಹಾರಾಷ್ಟ್ರದ ನಾಸಿಕ್‌ನಿಂದ ವರದಿಯಾಗಿದೆ.

ನಾಸಿಕ್ ನಗರದ ಪೊಲೀಸ್ ಠಾಣೆಯಲ್ಲಿ ನಡೆದಿದ್ದು, ಮೃತರನ್ನು ಅಶೋಕ್ ನಜನ್ (40) ಎಂದು ಗುರುತಿಸಲಾಗಿದೆ. ಅಶೋಕ್ ಇಂದು( ಮಂಗಳವಾರ) ಬೆಳಿಗ್ಗೆ ಅಂಬಾಡ್ ಪೊಲೀಸ್ ಠಾಣೆಯಲ್ಲಿ ಕರ್ತವ್ಯಕ್ಕೆ ಹಾಜರಾಗಿದ್ದರು. ಕೆಲ ಸಮಯದ ಬಳಿಕ ಅವರು ಠಾಣೆಯ ತಮ್ಮ ಕೊಠಡಿಯಲ್ಲಿ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಅಸಹಜ ಸ್ಥಿತಿಯಲ್ಲಿ ಕಂಡು ಬಂದ ಅಶೋಕ್ ಅವರನ್ನು ಪೊಲೀಸ್ ಸಿಬ್ಬಂದಿ ಸ್ಥಳೀಯ ಆಸ್ಪತ್ರೆಗೆ ಕರೆದೊಯ್ದರು, ಆದರೆ ಅಷ್ಟರ ಹೊತ್ತಿಗೆ ಅಶೋಕ್ ಮೃತಪಟ್ಟಿದ್ದರು. ಘಟನೆಯ ನಂತರ ಪೊಲೀಸ್ ಕಮಿಷನರ್ ಸಂದೀಪ್ ಕಾರ್ಣಿಕ್ ಹಾಗೂ ಇತರ ಹಿರಿಯ ಅಧಿಕಾ-ರಿಗಳು ಪೊಲೀಸ್ ಠಾಣೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. 'ಆತ್ಮಹತ್ಯೆಗೆ ಕಾರಣ ಇನ್ನೂ ತಿಳಿದುಬಂದಿಲ್ಲ, ತನಿಖೆ ನಡೆಸಲಾಗುತ್ತಿದೆ ಎಂದು ಪೊಲೀಸ್ ಕಮಿಷನರ್ ಸಂದೀಪ್' ಹೇಳಿದ್ದಾರೆ.

## ತೋಟಗಾರಿಕೆ ಇಲಾಖೆ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024-25ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ತೋಟಗಾರಿಕೆ ಬೆಳೆಗಳಾದ ಬಾಳೆ, ದ್ರಾಕ್ಷಿ, ದಾಳಿಂಬೆ, ಮಾವು, ಅಂಜೂರ, ಡ್ರಾಗನ್ ಹಣ್ಣು, ಗೇರು, ಸ್ಟ್ರಾಬೇರಿ, ಜಾಮುನು, ಪೇರಲ, ಬೆಣ್ಣೆ ಹಣ್ಣು, ಹೈಬ್ರಿಡ್ ತರಕಾರಿ ಹಾಗೂ ವಿವಿಧ ಹೂವು ಬೆಳೆಗಳ ಮೇಲೆ ಸಹಾಯಧನವನ್ನು ನೀಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

ಬೆಳೆಗಳ ಅನುಗುಣವಾಗಿ ರೂ. 10,000 ಗಳಿಂದ ರೂ. 30,000 ಪ್ರತಿ ಹೆಕ್ಟೇರ್ ಸಹಾಯಧನವನ್ನು ಹಾಗೂ ನೀರಾವರಿ ವ್ಯವಸ್ಥೆಗಾಗಿ ಸಮುದಾಯ ಕೃಷಿ ಹೊಂಡಕ್ಕೆ ರೂ. 4.00 ರಿಂದ 5.32 ಲಕ್ಷಗಳ ವರೆಗೆ ಹಾಗೂ ವೈಯಕ್ತಿಕ ಕೃಷಿಹೊಂಡಕ್ಕೆ ರೂ. 75,000 ಗಳ ಸಹಾಯಧನ ನೀಡಲಾಗುವುದು. ಸಂರಕ್ಷಿತ ಬೇಸಾಯ ಪದ್ಧತಿ ಅಳವಡಿಸಿಕೊಂಡು ಪಾಲಿಮನೆ ನಿರ್ಮಿಸಲು ಪ್ರತಿ 10 ಗುಂಟೆಗೆ ರೂ. 4.70 ಲಕ್ಷಗಳ ಹಾಗೂ ಪ್ಲಾಸ್ಟಿಕ್ ಹೊದಿಕೆಗಾಗಿ ರೂ. 16,000 ಪ್ರತಿ ಹೆಕ್ಟೇರ್‌ರಂತೆ ಸಹಾಯಧನವನ್ನು ನೀಡಲಾಗುವುದು. ಅಷ್ಟೇ ಅಲ್ಲದೆ ಕೋಯ್ಲೊತ್ತರ ನಿರ್ವಹಣೆಗಾಗಿ ಪ್ಯಾಕ್‌ಹೌಸ್ ನಿರ್ಮಿಸಿಕೊಳ್ಳಲು ಗರಿಷ್ಠ 2 ಲಕ್ಷ, ಪ್ರಾಥಮಿಕ ಸಂಸ್ಕರಣಾ ಘಟಕ ನಿರ್ಮಿಸಲು ಗರಿಷ್ಠ 10 ಲಕ್ಷ, ಹಣ್ಣು ಮಾಗಿಸುವ ಘಟಕಕ್ಕೆ ಪ್ರತಿ ಟನ್‌ಗೆ ರೂ. 35,000 ರಂತೆ ಗರಿಷ್ಠ 300 ಟನ್ ಸಾಮರ್ಥ್ಯದ ವರೆಗೆ ಪ್ರತಿ ಫಲಾನುಭವಿಗಳಿಗೆ ಸಹಾಯಧನ ನೀಡಲಾಗುವುದು. ತರಕಾರಿ ಮತ್ತು ಹಣ್ಣು ಮಾರಾಟ ಮಾಡಲು ತಳ್ಳುವ ಗಾಡಿಗೆ ರೂ. 15,000 ಸಹಾಯಧನವನ್ನು ಮಾರ್ಗಸೂಚಿಯನ್ವಯ ವೆಚ್ಚವನ್ನು ಪರಿಗಣಿಸಿ ಸಹಾಯಧನ ನೀಡಲಾಗುವುದು.

ಆಸಕ್ತ ರೈತರು ತಮ್ಮ ತಾಲೂಕಿನ ತೋಟಗಾರಿಕೆ ಇಲಾಖೆಗೆ ಬೇಟಿ ನೀಡಿ ಹೆಚ್ಚಿನ ಮಾಹಿತಿ ಪಡೆದುಕೊಂಡು ಅರ್ಜಿ ಸಲ್ಲಿಸಲು ಬೆಳಗಾವಿ ಜಿಲ್ಲೆಯ ತೋಟಗಾರಿಕೆ ಹಿರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಯ ಗ್ರಾಮೀಣ ಪ್ರದೇಶದ ಮಹಿಳಾ ನಿರುದ್ಯೋಗಿಗಳಿಗೆ ಬೆಳಗಾವಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ) ವತಿಯಿಂದ ಮಾರ್ಚ್ 4ಕ್ಕೆ ಆರಂಭವಾಗುವ ಹೊಲಿಗೆ/ವಸ್ತ್ರ ವಿನ್ಯಾಸ ಮತ್ತು ಸಿದ್ಧ ಉಡುಪು ತಯಾರಿಕೆ ಮತ್ತು ವಸ್ತ್ರ ಚಿತ್ರಕಲಾ ಉದ್ಯಮಿ (ಕಸೂತಿ) 30 ದಿನಗಳ ತರಬೇತಿಯನ್ನು ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ತರಬೇತಿ ಪಡೆಯುವ ಅಭ್ಯರ್ಥಿಗಳು 18 ರಿಂದ 45 ವಯಸ್ಸಿನವರಾಗಿರಬೇಕು. ಬಿಪಿಎಲ್ ಅಥವಾ ಜಾಬ್ ಕಾರ್ಡ್ ಹೊಂದಿರಬೇಕು. ಅರ್ಜಿ ಸಲ್ಲಿಸಲು ಬಿಪಿಎಲ್ ಕಾರ್ಡ್, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಮೂರು ಪಾಸ್‌ಪೋರ್ಟ್ ಸೈಜ್ ಭಾವಚಿತ್ರ ಕಡ್ಡಾಯ. ಗ್ರಾಮೀಣ ವಿಭಾಗದ ಮಹಿಳೆಯರಿಗೆ ಮೊದಲ ಆದ್ಯತೆಯಿರುತ್ತದೆ. ತರಬೇತಿ ಅವಧಿಯಲ್ಲಿ ಊಟ ಮತ್ತು ವಸತಿ ಉಚಿತವಾಗಿದೆ.

ಆಸಕ್ತರು ಮಾ.1 ಒಳಗಾಗಿ ಅರ್ಜಿಯನ್ನು ಸಂಸ್ಥೆಯ ಅರ್ಜಿ ನಮೂನೆಯಲ್ಲಿ ಅಥವಾ ಬಿಳಿಹಾಳಿಯಲ್ಲಿ ನೇರವಾಗಿ ಕಾರ್ಯಾಲಯಕ್ಕೆ, ಪೋಸ್ಟ್ ಮುಖಾಂತರ ಸಲ್ಲಿಸಬಹುದು. ಅಥವಾ ಇಮೇಲ್ cbrsetibelagavi@gmail.com ಗೆ ಕಳುಹಿಸಬಹುದು. ಗೂಗಲ್ ಲಿಂಕ್ https://forms.gle/Y1hntNgHijkmga8d7 ಮೂಲಕ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಕಣಬರ್ಗಿ ಆಟೋ ನಗರದ ಇಂಡಸ್ಟ್ರಿಯಲ್ ಏರಿಯಾ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ (ಸಿಬಿ ಆರ್‌ಸೆಟಿ), ಪಾಟ್ ನಂ. ಸಿಎ-03 (ಪಾರ್ಟ್) ದೂರವಾಣಿ 0831-2440644, 8296792166, 9845750043, 8050406866, 8867388906 ಅಥವಾ 9449860564 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಫಸಲ್ ಭೀಮಾ ಯೋಜನೆ; ಬೆಳೆ ವಿಮೆ ತಿರಸ್ಕೃತ ಅರ್ಜಿಗಳ ಆಕ್ಷೇಪಣೆಗೆ ಅವಕಾಶ

ಬೆಳಗಾವಿ: ಕರ್ನಾಟಕ ರೈತ ಸುರಕ್ಷಾ ಮತ್ತು ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ಬೆಳೆ ವಿಮೆಗೆ ಜಿಲ್ಲೆಯ ಒಟ್ಟು 754 ರೈತರ ವಿಮಾ ಪ್ರಸ್ತಾವನೆ ಅರ್ಜಿಗಳು ವಿಮಾ ಸಂಸ್ಥೆಯಿಂದ ತಿರಸ್ಕೃತಗೊಂಡಿವೆ. ತಿರಸ್ಕೃತಗೊಂಡ ಅರ್ಜಿಗಳಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ.

ತಿರಸ್ಕೃತ ಅರ್ಜಿಗಳ ವಿವರವನ್ನು ಪಟ್ಟಣದ ಸಹಾಯಕ ಕೃಷಿ ನಿರ್ದೇಶಕರ ಕಚೇರಿ, ರೈತ ಸಂಪರ್ಕ ಕೇಂದ್ರ ಕಾಕತಿ, ಉಚಗಾಂವ, ಬೆಳಗಾವಿ, ಹಿರೇಬಾಗೇವಾಡಿ ಹಾಗೂ ಆಯಾ ಗ್ರಾಮ ಪಂಚಾಯಿತಗಳ ಸೂಚನಾ ಫಲಕಗಳಲ್ಲಿ ಲಗತ್ತಿಸಲಾಗಿದೆ.

ತಿರಸ್ಕೃತ ವಿಮಾ ಪ್ರಸ್ತಾವನೆಗಳ ಬಗ್ಗೆ ಮನವರಿಕೆ ಮಾಡಿಕೊಂಡು 2022- 23ರ ಪಹಣಿ ಪತ್ರಿಕೆ, ಬೆಂಬಲ ಬೆಲೆ ಪ್ರಯೋಜನದ ರಸೀದಿ ಮತ್ತು ಬೆಳೆ ಮಾರಾಟದ ದಾಖಲಾತಿಯೊಂದಿಗೆ ಫೆ. 26ರ ಒಳಗಾಗಿ ಮತ್ತೊಮ್ಮೆ ಅರ್ಜಿ ಸಲ್ಲಿಸುವಂತೆ ಸಹಾಯಕ ಕೃಷಿ ನಿರ್ದೇಶಕ ಎಂ. ಎಸ್. ಪಟಗುಂದಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತ್ರಿಪದಿ ಕವಿ ಸರ್ವಜ್ಞ ಜಯಂತಿ ಉತ್ಸವ-2024

## ಯುವ ಪೀಳಿಗೆ ಸಮಗ್ರ ಅಭಿವೃದ್ಧಿ ಹೊಂದಲು ಶಿಕ್ಷಣ ಅವಶ್ಯಕ: ಡಾ. ನಿರ್ಮಲ ಬಟ್ಟಲ

ಬೆಳಗಾವಿ: ಸಮಾಜದಲ್ಲಿ ಗೌರವಯುತವಾಗಿ ಬಾಳಲು ಶಿಕ್ಷಣ ಮುಖ್ಯ. ಸಮಾಜದಲ್ಲಿ ಶಿಕ್ಷಣ ವೃತ್ತಿಗೆ ಹೆಚ್ಚು ಒತ್ತು ನೀಡಬೇಕು. ಮುಂದಿನ ಪೀಳಿಗೆ ಸಮಗ್ರ ಅಭಿವೃದ್ಧಿ ಹೊಂದಲು ಶಿಕ್ಷಣದ ಪಾತ್ರ ಬಹಳಷ್ಟಿದೆ ಎಂದು ಬೆಳಗಾವಿ ಎಂ.ಎನ್.ಆರ್ ಶಿಕ್ಷಣ ಮಹಾವಿದ್ಯಾಲಯ ಪ್ರಾಚಾರ್ಯರಾದ ಡಾ. ನಿರ್ಮಲ ಬಟ್ಟಲ ಅವರು ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆಯ ಸಂಯುಕ್ತಾಶ್ರಯದಲ್ಲಿ ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಮಂಗಳವಾರ (ಫೆ.20) ನಡೆದ ತ್ರಿಪದಿ ಕವಿ ಸರ್ವಜ್ಞ ಜಯಂತಿ ಉತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

16ನೇ ಶತಮಾನದಲ್ಲಿ ತ್ರಿಪದಿ ಕವಿ



ಸರ್ವಜ್ಞ ತಮ್ಮ ವಚನಗಳ ಮೂಲಕ ಸಮಾಜದಲ್ಲಿದ್ದ, ಸಾಮಾಜಿಕ ಮತ್ತು ಧಾರ್ಮಿಕ ವಿಚಾರಗಳ ಕುರಿತು ಅನೇಕ ಮಾಹಿತಿ ನೀಡಿದ್ದಾರೆ. ಜಾತಿ, ಮತ, ಪಂಥಗಳ ಬಗ್ಗೆ ಸಮಾಜದ ಅಂಕು-ಡೊಂಕು ತಿದ್ದುವ ಮೂಲಕ ಮನುಷ್ಯರಾಗಿ ಬಾಳುವುದು ಮುಖ್ಯ ಎಂದು ಕವಿ ಸರ್ವಜ್ಞರು ಮನುಕುಲಕ್ಕೆ ಸಂದೇಶ ಸಾರಿದ್ದಾರೆ. ಸರ್ವಜ್ಞ ಸರಳ ಭಾಷೆಯಲ್ಲಿ ಸಾಹಿತ್ಯ ರಚಿಸಿ, ತಮ್ಮ ಅಲೋಚನೆ ಮೂಲಕ ವಚನಗಳನ್ನು ನೀಡಿದ್ದಾರೆ. ಸಮಾಜದ ಆಗುಹೋಗುಗಳ ಬಗ್ಗೆ ಬೆಳಕು ಚೆಲ್ಲಿದ್ದಾರೆ. ವಿಶಿಷ್ಟ ಸಾಹಿತ್ಯ ಪರಂಪರೆಯನ್ನು ಹುಟ್ಟು ಹಾಕಿದ್ದ ಸರ್ವಜ್ಞರ ತ್ರಿಪದಿ ಸಾಹಿತ್ಯ ಸಾರ್ವಕಾಲಿಕವಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಎಲ್ಲ ಸಮುದಾಯದ ಜ್ಞಾನದ ದಿಕ್ಕನ್ನೇ ಬದಲಾಯಿಸಿದ ಕೀರ್ತಿ ಸರ್ವಜ್ಞರಿಗೆ ಸಲ್ಲುತ್ತದೆ. ಜನಸಾಮಾನ್ಯರು ಅರ್ಥೈಸಿಕೊಳ್ಳುವಂತಹ ಬದುಕಿನ ನೈಜ್ಯ ಸ್ಥಿತಿಯನ್ನು ತಮ್ಮದೇಯಾದ ಸಾಲುಗಳಲ್ಲಿ ರಚಿಸಿ ಸಮಾಜದಲ್ಲಿ ಸಾಮರಸ್ಯ ಮತ್ತು ಧಾರ್ಮಿಕ ಜಾಗೃತಿಯನ್ನು ಉಂಟು ಮಾಡಿದವರು ಕವಿ ಸರ್ವಜ್ಞರು ಎಂದು ಹೇಳಿದರು.

ತಮ್ಮ ತ್ರಿಪದಿಗಳ ಅತ್ಯಂತ ಸರಳವಾದ ಕನ್ನಡ ಭಾಷೆಯ ಮೂಲಕ ಜೀವನ, ಆದರ್ಶ ಮತ್ತು ನೈತಿಕ ಮೌಲ್ಯಗಳನ್ನು ತಿಳಿಸಿದ್ದಾರೆ. ಇವುಗಳನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಆದರ್ಶ ಬದುಕು ರೂಪಿಸಿಕೊಳ್ಳಬೇಕು ಎಂದರು.

ಕುಂಬಾರಿಕೆ ಕಲೆಯು ಕುಂಬಾರರಿಗೆ ವರವಾಗಿ ಬಂದಿದೆ. ಈ ಕಲೆ ಉಳಿಸಿಕೊಳ್ಳಲು ಅದಕ್ಕೆ ಆಧುನಿಕ ಸ್ಪರ್ಶ ನೀಡಬೇಕು. ಅದಕ್ಕಾಗಿ ಕೌಶಲ್ಯಾಧಾರಿತ ತರಬೇತಿ ಪಡೆಯಬೇಕು. ಸರ್ಕಾರ ನೀಡುವ ಸೌಲಭ್ಯಗಳನ್ನು ಪಡೆದು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಡಾ. ನಿರ್ಮಲ ಬಟ್ಟಲ ಅವರು ಸಲಹೆ ಹೇಳಿದರು.

**ವಿದ್ಯಾರ್ಥಿಗಳಿಗೆ ಸನ್ಮಾನ:**

ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ಕುಂಬಾರ ಸಮಾಜದ ಜಿಲ್ಲೆಯ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲಾಯಿತು.

ಬೆಳಗಾವಿ ತಹಸೀಲ್ದಾರರಾದ ಸಿದ್ದು ಬೋಸಗಿ, ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯದರ್ಶಿಗಳಾದ ರಾಹುಲ್ ಕಾಂಬಳೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಸಮಾಜದ ಮುಖಂಡರಾದ ಡಾ. ಆಯ್. ಎಸ್. ಕುಂಬಾರ, ಸುರೇಶ, ಚಂದ್ರಶೇಖರ ಯಡೂರ್, ನಿಂಗಪ್ಪ ಕುಂಬಾರ, ಜ್ಯೋತಿ ಬದಾಮಿ ಸೇರಿದಂತೆ ಮತ್ತಿತರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಬೆಳಗಾವಿ: ವಚನ ಕಂಠಪಾಠ ಸ್ಪರ್ಧೆ



ಬೆಳಗಾವಿ: ವಚನಗಳು ಮನುಷ್ಯರಲ್ಲಿ ನೈತಿಕ ಶಕ್ತಿಯನ್ನು ನಿಜ ಭಕ್ತಿಯನ್ನು ವೃದ್ಧಿಸುತ್ತವೆ. ವಚನ ಎಂದರೆ ಭಾಷೆ ಅಥವಾ ಭರವಸೆ ಕೊಟ್ಟಂತೆ, (Promise) ಆ ಶಕ್ತಿ ವಚನಗಳಿಗೆ ಇದೆ. ನುಡಿದಂತೆ ನಡೆಯುವ ಮನಸ್ಥಿತಿ ದೃಡವಾಗುತ್ತದೆ. ಒಂಬತ್ತನೂರು ವರ್ಷಗಳ ಹಿಂದೆ ಸಾಂಸ್ಕೃತಿಕ ನಾಯಕ ವಿಶ್ವಗುರು ಬಸವಣ್ಣನವರ ಮಾರ್ಗದರ್ಶನದಲ್ಲಿ ಕಾಯಕ ವರ್ಗದ ಎಲ್ಲ ಪಂಗಡದವರು ಅನುಭವ ಮಂಟಪದಲ್ಲಿ ಕನ್ನಡ ಅಕ್ಷರಗಳನ್ನು ಕಲಿತು ಮಾನವ ಸಮಾಜಕ್ಕೆ ದಾರಿ ತೋರುವ ವಚನ ಸಾಹಿತ್ಯವನ್ನು ಕೊಟ್ಟಿದ್ದಾರೆ ಎ0ದು ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಅಧ್ಯಕ್ಷರು ಹಾಗೂ ನ್ಯಾಯವಾದಿಗಳಾದ ಶರಣ ಬಸವರಾಜ ರೊಟ್ಟಿ ಅವರು ಹೇಳಿದರು.

ಜಾಗತಿಕ ಲಿಂಗಾಯತ ಮಹಾ ಸಭಾದ ಮಹಾನಗರ ಹಾಗೂ ಬೆಳಗಾವಿ ತಾಲೂಕ ಘಟಕದ ವತಿಯಿಂದ ದಿನಾಂಕ 18- 2 - 2024 ರಂದು ನಗರದಲ್ಲಿ ಜರುಗಿದ ವಿಶ್ವಗುರು ಬಸವಣ್ಣನವರ ವಚನ ಕಂಠಪಾಠ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ತಾಲೂಕ ಘಟಕದ ಅಧ್ಯಕ್ಷರಾದ ಶರಣ ಬಿ.ಜಿ ವಾಲಿಇಟಗಿ ಹಾಗೂ ನಗರ ಮಹಿಳಾ ಘಟಕದ ಗೌರವಾಧ್ಯಕ್ಷೆ ಶರಣೆ ಮಹಾನಂದಾ ಪರುಶೆಟ್ಟಿ ಮಾತನಾಡಿದರು.

ಪ್ರಾರಂಭದಲ್ಲಿ ಬೆಳಗಾವಿ ಮಹಾನಗರ ಘಟಕದ ಪ್ರಧಾನ ಕಾರ್ಯದರ್ಶಿ ಶರಣ ಸಿ.ಎಂ ಬೂದಿಹಾಳ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಂಚಾರಿ ಗುರು ಬಸವ ಬಳಗದ ಶರಣ ಮಹಾಂತೇಶ ತೋರಣಗಟ್ಟಿ ವಚನ ಕಂಠಪಾಠ ಸ್ಪರ್ಧೆಯ ನಿಯಮಗಳನ್ನು ಹಾಗೂ ನಿರ್ಣಾಯಕರ ಕಾರ್ಯವಿಧಾನಗಳ ಬಗ್ಗೆ ವಿವರಿಸಿದರು. ಪ್ರೋ ಅಡಿವೆಪ್ಪ ಇಟಗಿ ಕಾರ್ಯಕ್ರಮ ನಿರೂಪಿಸಿದರು. ಜಾಗತಿಕ ಲಿಂಗಾಯತ ಮಹಾಸಭಾದ ಪಧಾಧಿಕಾರಿಗಳು ಹಾಗೂ ಸಂಚಾರಿ ಗುರು ಬಸವ ಬಳಗದ ಪಧಾದಿಕಾರಿಗಳು ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದರು.

ವಚನ ಕಂಠಪಾಠ ಸ್ಪರ್ಧೆಯಲ್ಲಿ ಹೆಚ್ಚು ವಚನಗಳನ್ನು ಹೇಳಿದ ಕುಮಾರಿ ಪ್ರಯುಕ್ತಾ ಜಗದೀಶ ಯವಕನಮರಡಿ ಪ್ರಥಮ ಸ್ಥಾನ, ಕುಮಾರಿ ಸ್ವಾತಿ ಬಾಬುರಾವ್ ಪಾಟೀಲ ದ್ವಿತಿಯ ಸ್ಥಾನ, ಹಾಗೂ ಶ್ರವಣಕುಮಾರ ಕಲ್ಲಪ್ಪ ದೇವರಮನಿ ತೃತಿಯ ಸ್ಥಾನ ಪಡೆದುಕೊಂಡರು. ಭಾಗವಹಿಸಿದ ಎಲ್ಲರಿಗೂ ಪ್ರಶಂಸನಾ ಪ್ರಮಾಣ ಪತ್ರ ನೀಡಲಾಯಿತು.

## ಇಂದು ಬಿ.ವ್ಹಿ.ಬೆಲ್ಲದ ಕಾನೂನು ಕಾಲೇಜಿನಲ್ಲಿ 'ಅಧಿನಿಯಮ್ ದರ್ಶನ್' ಕಾನೂನು ಪ್ರದರ್ಶನ

ಬೆಳಗಾವಿ: ಲಿಂಗರಾಜ ಕಾಲೇಜಿನ ಆವರಣದಲ್ಲಿರುವ ಕೆ.ಎಲ್.ಇ. ಸೊಸೈಟಿಯ ಬಿ.ವಿ.ಬೆಲ್ಲದ್ ಕಾನೂನು ಮಹಾ ವಿದ್ಯಾಲಯವು ಫೆಬ್ರವರಿ 21 ರಂದು ಬುಧವಾರ ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆಬೆಲ್ಲದ ಕಾನೂನು ಕಾಲೇಜಿನ ಸೆಮಿನಾರ್ ಹಾಲ್‌ನಲ್ಲಿ "ಅಧಿನಿಯಮ ದರ್ಶನ್ - ನ್ಯಾಯ ಅನಾವರಣ: ಕಾನೂನು ಪರಿಶೋಧನೆ" ಕಾನೂನು ಪ್ರದರ್ಶನವನ್ನು ಆಯೋಜಿಸಿದೆ.

ಈ ಕಾನೂನು ಪ್ರದರ್ಶನವನ್ನು ಹಿರಿಯ ನ್ಯಾಯವಾದಿ ಎಸ್.ಬಿ.ಶೇಖ್ ಅವರು ಉದ್ಘಾಟಿಸಲಿದ್ದಾರೆ. ಸಮಾರಂಭದ ಕಾಲೇಜಿನ ಸ್ಥಾನಿಕ ಆಡಳಿತ ಮಂಡಳಿಯ ಅಧ್ಯಕ್ಷರಾದ ಆರ್.ಬಿ.ಬೆಲ್ಲದ್ ಅವರು ವಹಿಸಲಿದ್ದಾರೆ.

ಪ್ರದರ್ಶನದ ಸಂದರ್ಭದಲ್ಲಿ ಭಾರತೀಯ ಸುಪ್ರೀಂಕೋರ್ಟ್ ಸೇರಿದಂತೆ ವಿವಿಧ ನ್ಯಾಯಾಲಯಗಳ ಮಾದರಿಗಳ ಪ್ರದರ್ಶನ ಸೇರಿದಂತೆ ಜಾಗೃತಿ ಮೂಡಿಸಲು ಐತಿಹಾಸಿಕ ಪ್ರಕರಣಗಳು, ಸಂಗತಿಗಳು, ಕಾನೂನು ಸಾಮಗ್ರಿಗಳನ್ನು ಪ್ರದರ್ಶಿಸಲಾಗುತ್ತಿದೆ. ಪ್ರಾಂಶುಪಾಲ ಡಾ.ಬಿ.ಜಯಸಿಂಹ ಅವರ ಮಾರ್ಗದರ್ಶನದಲ್ಲಿಜರುಗತ್ತಿರುವ ಈ ಪ್ರದರ್ಶನದ ಕಾರ್ಯಕ್ರಮವನ್ನು ಸಹಾಯಕ ಪ್ರಾಧ್ಯಾಪಕಿ ರಾಜಶ್ರೀ ಪಾಟೀಲ ಸಂಯೋಜಿಸಿದ್ದಾರೆ. ಸಾರ್ವಜನಿಕರೂ ಹಾಗೂ ಬೆಳಗಾವಿ ನಗರದ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಕಾನೂನು ಪ್ರದರ್ಶನಕ್ಕೆ ಭೇಟಿ ನೀಡಿ ಈ ಪ್ರದರ್ಶನದ ಲಾಭ ಪಡೆಯಬೇಕೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಮತೀರ್ಥನಗರ ಶಿವಾಲಯದ 18ನೇ ವರ್ಷದ ಜಾತ್ರಾ ಮಹೋತ್ಸವ ಸಮಾರಂಭ

## ಮಕ್ಕಳಿಗೆ ಉತ್ತಮ ವಿದ್ಯೆ-ಸಂಸ್ಕಾರವನ್ನು ನೀಡಿ: ಚಂದ್ರಶೇಖರ ಶಿವಾಚಾರ್ಯ ಸ್ವಾಮಿಜೀ

ಬೆಳಗಾವಿ: ಸುಸಂಸ್ಕೃತ ಸಮಾಜ ಕಟ್ಟಲು ಪೋಷಕರು ಮಕ್ಕಳಿಗೆ ಉತ್ತಮ ವಿದ್ಯೆ ಮತ್ತು ಸಂಸ್ಕಾರವನ್ನು ನೀಡಬೇಕು . ಇಲ್ಲವಾದರೆ ಮುದೊಂದು ದಿನ ಸಮಾಜದಲ್ಲಿ ಅಪಾಯಕಾರಿ ಬೆಳವಣಿಗೆ ಎದುರಾದರೂ ಆಶ್ಚರ್ಯ ಪಡೆಬೇಕಿಲ್ಲ" ಎಂದು ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಇಲ್ಲಿನ ರಾಮತೀರ್ಥನಗರಲ್ಲಿರುವ ಶಿವಾಲಯದ 18ನೇ ವರ್ಷದ ಜಾತ್ರಾ ಮಹೋತ್ಸವ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು. ಹಿರಿಯರ ಪರಂಪರೆ ಉಳಿಯಬೇಕಾದರೆ ಸಾಮೂಹಿಕ ಕಾರ್ಯಕ್ರಮ ಆಯೋಜನೆ ಮಾಡಬೇಕು. ರೈತಪರಿವಾರದಿಂದ ಬಂದಿರುವ ನಾವೆಲ್ಲರೂ ಜಾತ್ರಾ ಮಹೋತ್ಸವಗಳಲ್ಲಿ ಭಾಗಿಯಾಗಿ ಚೈತನ್ಯ ಬುದುಕು ಸಾಗಿಸೋಣ. ಜಗತ್ತಿನಲ್ಲಿ ಎಲ್ಲವನ್ನು ಪಡೆದುಕೊಳ್ಳಬಹುದು. ಆದರೆ, ವಿದ್ಯೆ ಮತ್ತು ಸಂಸ್ಕಾರ ಮಾತ್ರ



ತಂದೆ-ತಾಯಿಯರಿಂದ ಹಾಗೂ ಸಾಮೂಹಿಕ ಕಾರ್ಯಕ್ರಮಗಳಿಂದ ಬೆಳೆದು ಬರುತ್ತದೆ. ಈ ಮಕ್ಕಳು ಸಮಾಜದ ಭವಿಷ್ಯ. ಹೀಗಾಗಿ ಅವರಿಗೆ ಉತ್ತಮ ಮಾರ್ಗಗಳನ್ನು ತೋರಿಸಬೇಕಾಗಿರುವುದು ನಮ್ಮ ಜವಾಬ್ದಾರಿ ಎಂದು ಶ್ರೀಗಳು ಆಶೀರ್ವದಿಸಿದರು.

ಕೇವಲ 18 ವರ್ಷದಲ್ಲಿ ಶಿವಾಲಯ ಮಂದಿರ ಈ ಭಾಗದ ಪವಾಡ- ಪುಣ್ಯದ ಕ್ಷೇತ್ರವಾಗಿದೆ. ಈ ಶಿವಾಲಯ ಮಂದಿರ ಲಕ್ಷಾಂತರ ಭಕ್ತರನ್ನು ಹೊಂದಿದ್ದು, ಇಲ್ಲಿ ಭಕ್ತಿಯಿಂದ ನಡೆದುಕೊಂಡವರು ಬದುಕಿನಲ್ಲಿ ಏಳಿಗೆ ಕಂಡಿದ್ದಾರೆ ಇದೊಂದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಬಿಜೆಪಿ ಹಿರಿಯ ನಾಯಕ ಶಂಕರಗೌಡ ಪಾಟೀಲ ಮಾತನಾಡಿ, ಸಾಮೂಹಿಕ ಕಾರ್ಯಕ್ರಮಗಳಿಂದ ಸಂಸ್ಕೃತಿ, ಸಂಬಂಧಗಳು ಗಟ್ಟಿಯಾಗಿ ಉಳಿಯಲು ಸಾಧ್ಯ. ಹಿರಿಯರು ಹಾಕಿ ಕೊಟ್ಟ ಮಾರ್ಗದಲ್ಲಿ ನಾವೆಲ್ಲರೂ ಸಾಗೋಣ. ನಮ್ಮ ಸಂಬಂಧಗಳು ಗಟ್ಟಿಯಾಗಿ ಉಳಿಯಬೇಕಾದರೆ ಮಾನವೀಯತೆ ಮೌಲ್ಯಗಳನ್ನು ಅಳವಡಿಸಿಕೊಳ್ಳೋಣ ಎಂದರು.

ಯುವ ನಾಯಕ ರಾಹುಲ್ ಜಾರಕಿಹೊಳಿ ಮಾತನಾಡಿ, ಬಸವಾದಿ ಶರಣರು ಸಮಸಮಾಜ ಕನಸನ್ನು ಕಂಡವರು. ಶರಣ ತತ್ವ ಮಾರ್ಗದರ್ಶದಲ್ಲಿ ಸಾಗೋಣ ಎನ್ನುತ್ತ ತಂದೆಯವರಾದ ಸತೀಶ ಜಾರಕಿಹೊಳಿ ಅವರು ಜಾತ್ರಾ ಮಹೋತ್ಸವ ಹಾಗೂ ಸಮುದಾಯಗಳಿಗೆ ಸಹಾಯ-ಸಹಕಾರ ಮಾಡಿದ್ದಾರೆ. ಈ ಶಿವಾಲಯಕ್ಕೆ ಅಗತ್ಯವಾಗಿರುವ ಕುರ್ಚಿ-ಸೌಂಡ್ ಸಿಸ್ಟಮ್ ನೀಡಲಾಗಿದೆ ಪ್ರತಿವರ್ಷವೂ ಜಾತ್ರೆ ಅದ್ದೂರಿಯಾಗಿ ನಡೆಯಲಿ ಎಂದು ಹೇಳಿದರು.

ಶಿವಾಲಯ ಟ್ರಸ್ಟ್ ಅಧ್ಯಕ್ಷ ಎಸ್. ಎಸ್. ಕಿವಡಸಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿ, ಶ್ರೀ ಚಂದ್ರಶೇಖರ ಶಿವಾಚಾರ್ಯ ಮಹಾಸ್ವಾಮಿಗಳು ಶಿವಾಲಯದ ಅಭಿವೃದ್ಧಿಗೆ ಸಾಕಷ್ಟು ಸಹಕಾರ ನೀಡಿದ್ದಾರೆ. ನಡೆದಾಡುವ ದೇವರು ಶ್ರೀಗಳು ಎನ್ನುತ್ತ, ರಾಮತೀರ್ಥನಗರ ರವಾಸಿಗಳು ಮಧ್ಯಮ ವರ್ಗದವರು. ಶಿವಾಲಯ ಮಂದಿರ ಸೇರಿದಂತೆ ಇಲ್ಲಿನ ಅಭಿವೃದ್ಧಿಗೆ ಕೈಜೋಡಿಸಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಶಿವಾಲಯ ಟ್ರಸ್ಟ್ ಅಧ್ಯಕ್ಷ ಎಸ್. ಎಸ್. ಕಿವಡಸಣ್ಣವರ, ನಗರ ಸೇವಕ ಹನುಮಂತ ಕೊಂಗಾಲಿ, ಮಹೇಶ ಮಾವಿನಕಟ್ಟಿ, ಈರಣ್ಣ ಮದವಾಲ, ಶಂಕರಯ್ಯ ಪೂಜಾರಿ, ಎಂ. ವಾಯ್ ಪಟ್ಟಣಶೆಟ್ಟಿ, ಕೊಸವರಿ ಮಡಿವಾಳರ್, ಚಿನ್ನಪ್ಪಗೌಡರ್, ಚುಳಕಿ, ಸವದತ್ತಿ, ಭಕ್ತಾದಿಗಳು ಹಾಗೂ ಇತರರು ಇದ್ದರು.

## 3,600 ಕೋಟಿ ರೂ.ಗಳ ಯೋಜನೆಗೆ ಪ್ರಧಾನಿಯವರಿಂದ ಚಾಲನೆ; ಅದರಲ್ಲಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೆ ಶತಕೋಟಿ ರೂಪಾಯಿಗಳ ಕೇಂದ್ರದ ಅನುದಾನ

ಬೆಳಗಾವಿ: ಭಾರತದ ಪ್ರಧಾನ ಮಂತ್ರಿಗಳಾದ ಸನ್ಮಾನ್ಯ ಶ್ರೀ. ನರೇಂದ್ರ ಮೋದಿಜಿ ಅವರು ರಾಷ್ಟೊವ್ಯಾಪಿ ಅಭಿವೃದ್ಧಿ ಕಾರ್ಯಗಳಿಗೆ ದಿನಾಂಕ : 20-02-2024ರಂದು ಜಮ್ಮುವಿನಲ್ಲಿ 3,600 ಕೋಟಿ ರೂಪಾಯಿಗಳ ವೆಚ್ಚದ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯಕ್ಕೂ ಉಚ್ಚತರ ಶಿಕ್ಷಾ ಅಭಿಯಾನ ಯೋಜನೆಯಡಿಯಲ್ಲಿ ಶತಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿರುವರು. ರಾಷ್ಟೊವ್ಯಾಪಿ ನಡೆದ ಈ ಕಾರ್ಯಕ್ರಮದಲ್ಲಿ ಈ ಯೋಜನೆಯ ಫಲಾನುಭವಿ ಸಂಸ್ಥೆಗಳೆಲ್ಲವೂ ಆನ್‌ಲೈನ್ ಮೂಲಕ ಸಮಾವೇಶಗೊಂಡಿದ್ದವು. ಜಮ್ಮುವಿನಿಂದ ನೇರ ಪ್ರಸಾರಗೊಂಡ ಈ ಕಾರ್ಯಕ್ರಮವನ್ನು ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಮತ್ತು ಅವುಗಳ ಸಂಯೋಜಿತ ಮಹಾವಿದ್ಯಾಲಯಗಳಲ್ಲಿ ಏಕಕಾಲಕ್ಕೆ ಪ್ರಸಾರ ಮಾಡಲಾಯಿತು. ಇದರ ಪ್ರಮುಖ ಸಮಾರಂಭವು ರಾಣಿ



ಚನ್ನಮ್ಮ ವಿಶ್ವವಿದ್ಯಾಲಯದ ಕುವೆಂಪು ಸಭಾಭವನದಲ್ಲಿ ಸಮಾವೇಶಗೊಂಡಿತ್ತು.

ಕೇಂದ್ರ ಕಲ್ಲಿದ್ದಲು ಮತ್ತು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರಾದ ಸನ್ಮಾನ್ಯ ಶ್ರೀ.ಪ್ರಹ್ಲಾದ ಜೋಶಿ ಅವರು ಭಾಗವಹಿಸುವುದರ ಮೂಲಕ ವಿಶ್ವವಿದ್ಯಾಲಯದ ಬಹುದೊಡ್ಡ ಬೋಧಕ, ಬೋಧಕೇತರ ಹಾಗೂ ವಿದ್ಯಾರ್ಥಿ ಸಮುದಾಯವನ್ನು ಉದ್ದೇಶಿಸಿ ಮಾತನಾಡಿದರು. ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಮುಂಬರುವ ದಿನಗಳಲ್ಲಿ ಉತ್ತರ ಕರ್ನಾಟಕದ ಮಹತ್ವದ ಶೈಕ್ಷಣಿಕ ಕೇಂದ್ರವಾಗಲಿದ್ದು, ಅದಕ್ಕಾಗಿ ಶತಕೋಟಿ ರೂಪಾಯಿಗಳನ್ನು ವಿಶ್ವವಿದ್ಯಾಲಯಕ್ಕೆ ಮಂಜೂರು ಮಾಡಲಾಗಿದೆ ಎಂದು ಅಭಿಪ್ರಾಯಪಟ್ಟರು. ಯುವಜನರೇ ಅಧಿಕವಾಗಿರುವ ಭಾರತದಲ್ಲಿ ಉನ್ನತ ಶಿಕ್ಷಣವನ್ನು ರಚನಾತ್ಮಕವಾಗಿ ಕಟ್ಟುವುದು ಭಾರತ ಸರ್ಕಾರದ ಆಲೋಚನೆಯಾಗಿದೆ ಎಂದರು. ಪ್ರಧಾನಿಯವರ ಅಭಿವೃದ್ಧಿ ಸೂತ್ರವಾದ 'ಇದೇ ಸಮಯ, ಸರಿಯಾದ ಸಮಯ, ಭಾರತದ ಅತ್ಯಮೂಲ್ಯ ಸಮಯ', ಈ ಸಂದರ್ಭದಲ್ಲಿಯೇ ನಮ್ಮ ಯುವ ಜನತೆಗೆ ಭಾರತದ ಭವಿಷ್ಯದ ಕಲ್ಪನೆಯು ಉತ್ಕೃಷ್ಟತೆಯ ಉತ್ತುಂಗದ ಕನಸನ್ನು ನನಸಾಗಿಸುವುದು ಭಾರತದ ಸರ್ಕಾರದ ಸತ್ಸಂಸಕಲ್ಪವಾಗಿದೆ ಎಂದರು. ಇದೇ ಸಂದರ್ಭದಲ್ಲಿ ಹಾಜರಿದ್ದ ಬೆಳಗಾವಿಯ ಸಂಸದರಾದ ಸನ್ಮಾನ್ಯ ಶ್ರೀಮತಿ. ಮಂಗಳಾ ಸುರೇಶ ಅಂಗಡಿ ಅವರು ಮಾತನಾಡಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ನಮ್ಮ ನಾಡಿನ ಯುವಕರ ಭವಿಷ್ಯವನ್ನು ನಿರ್ಮಿಸಲು ಹಾಗೂ ಜ್ಞಾನಕ್ಷೇತ್ರವನ್ನು ಸಂವರ್ಧನೆಗೊಳಿಸಲು ಪ್ರಧಾನ ಮಂತ್ರಿಗಳು ಶತಕೋಟಿ ಅನುದಾನವನ್ನು ನೀಡಿರುವುದು ಸಮಯೋಚಿತವಾಗಿದೆ ಎಂದರು. ಚಿಕ್ಕೋಡಿ ಮತಕ್ಷೇತ್ರದ ಸಂಸತ ಸದಸ್ಯರಾದ ಸನ್ಮಾನ್ಯ ಶ್ರೀ. ಅಣ್ಣಾಸಾಹೇಬ ಜೊಲ್ಲೆ ಉಪಸ್ಥಿತರಿದ್ದರು.

ವಿಶ್ವವಿದ್ಯಾಲಯದ ಸುಮಾರು ಹತ್ತು ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಬೆಳಗಾವಿ ಮತ್ತು ವಿಜಯಪುರ ಜಿಲ್ಲೆಗಳ ಸಂಯೋಜಿತ ಕಾಲೇಜುಗಳಿಂದ ನೇರ ಪ್ರಸಾರದಲ್ಲಿ ಭಾಗಿಯಾಗಿದ್ದರು. ವಿಶ್ವವಿದ್ಯಾಲಯದ ಈ ಕಾರ್ಯಕ್ರಮವನ್ನು ವೀಕ್ಷಿಸಿದ ಕುಲಪತಿಗಳಾದ ಪ್ರೊ. ವಿ.ಎಫ್. ನಾಗಣ್ಣವರ, ಕುಲಸಚಿವರಾದ ಶ್ರೀಮತಿ. ರಾಜಶ್ರೀ ಜೈನಾಪೂರ, ಕುಲಸಚಿವರು(ಮೌಲ್ಯಮಾಪನ) ಪ್ರೊ. ರವೀಂದ್ರನಾಥ ಕದಂ, ಹಣಕಾಸು ಅಧಿಕಾರಿಗಳಾದ ಪ್ರೊ. ಎಸ್. ಬಿ.ಆಕಾಶ ಮಾತ್ರವಲ್ಲ ಸಾರ್ವಜನಿಕರು ಮತ್ತು ಹಲವು ಸ್ಥಾನಿಕ ಸಂಸ್ಥೆಗಳ ಜನಪ್ರತಿನಿಧಿಗಳು ವಿಶ್ವವಿದ್ಯಾಲಯದಲ್ಲಿ ಉಪಸ್ಥಿತರಿದ್ದರು. ಆರಂಭದಲ್ಲಿ ವಿಶ್ವವಿದ್ಯಾಲಯದ ಪರವಾಗಿ ಕೇಂದ್ರ ಸಚಿವರನ್ನು ಹಾಗೂ ಬೆಳಗಾವಿಯ ಸಂಸದರನ್ನು ಸನ್ಮಾನಿಸಲಾಯಿತು. ಪ್ರಮುಖ ವೇದಿಕೆಯೊಂದಿಗೆ ಮೂರು ಎಲ್.ಸಿ.ಡಿ.ಗಳನ್ನು ಅಳವಡಿಸಿ ಕಾರ್ಯಕ್ರಮದ ನೇರಪ್ರಸಾರದ ವೀಕ್ಷಣೆಗೆ ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ರಾಣಿ ಚನ್ನಮ್ಮ ವಿಶ್ವವಿದ್ಯಾಲಯವು ಅವಕಾಶ ಮಾಡಿಕೊಡಲಾಗಿತ್ತು.

## ವಿದ್ಯಾರ್ಥಿಗಳು ಉನ್ನತ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಲಿ: ಮಡಿವಾಳಪ್ಪ ತಿಗಡಿ




ಬೆಳಗಾವಿ: ವಿದ್ಯಾರ್ಥಿಗಳು ಕಾಲೇಜು ಶೀಕ್ಷಣ ಪಡೆಯುವ ಸಂದರ್ಭದಲ್ಲಿ ಉನ್ನತ ಶೀಕಷಣ ಪಡೆಯುವಲ್ಲಿ ಹೆಚ್ಚಿನ ಆಸಕ್ತಿ ಹೊಂದಿರಬೇಕು. ಅದರ ಜೊತೆಗೆ ಉನ್ನತ ಶಿಕ್ಷಣಕ್ಕಾಗಿ ಹೆಚ್ಚಿನ ಒತ್ತು ನೀಡಬೇಕೆಂದು ಲೆಕ್ಕ ಪರಿಶೋಧಕರ ಸಂಘ ಬೆಳಗಾವಿ ವಿಭಾಗದ ಆಧ್ಯಕ್ಷ ಹಗೂ ಖ್ಯಾತ ಲೆಕ್ಕ ಪರಿಶೋಧಕ ಮಡಿವಾಳಪ್ಪ ತಿಗಡಿ ಅವರು ಅಭಿಪ್ರಾಯಪಟ್ಟರು.

ಬೆಳಗಾವಿಯ ಭರತೇಶ ಶಿಕ್ಷಣ ಸಂಸ್ಥೆಯ ಜೆ.ಜಿ.ಎನ್.ಡಿ. ಭರತೇಶ ವಾಣಿಜ್ಯ ಮಹಾವಿದ್ಯಾಲಯದ ಎಂ.ಕಾಂ. ಪ್ರವೇಶ ಪಡೆದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ "ಆರಂಭ" ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲರೂ ಕನಿಷ್ಠ ವಿದ್ಯೆ ಹೊಂದುವುದು ಅಗತ್ಯವಾಗಿದೆ. ಕಾಲಕ್ಕೆ ತಕ್ಕಂತೆ ವಿದ್ಯಾಭ್ಯಾಸ ಮಾಡಿ ಉನ್ನತ ಶೀಕ್ಷಣ ಪಡೆಯಲು ಮುಂದೆ ಬರಬೇಕೆಂದು ಅವರು ಕರೆ ನೀಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ಖ್ಯಾತ ಲೆಕ್ಕಪರಿಶೋಧಕ ಸಂಜಯ ಶಿರಗುಪ್ಪಿ ಅವರು ವಹಿಸಿದ್ದರು. ಪ್ರಾಚಾರ್ಯ ಸುನಿತಾ ದೇಶಪಾಂಡೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಾಗರ ಹೆಗಡೆ ಅತಿಥಿಗಳನ್ನು ಸ್ವಾಗತಿಸಿದರು.ಕು ಹರ್ಷಾ ಅತಿಥಿಗಳನ್ನು ಪರಿಚಯಿಸಿದರು. ಶಾಲು ಬೇಪಾರಿ ವಂದಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089